# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 141 | ಆರ್‌ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 22–12–2024 ಭಾನುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 141 | RNI No: KARKAN/2023/88462 | KA/SK/CTA-874/2024-2026 | Chitradurga | Date: 22-12-2024 Sunday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕ್ಷಯ ರೋಗದ ಅಪಾಯ ಇರುವವರ ಆರೈಕೆ ಮಾಡಿ 2

ರೇಷ್ಮೆ ಕೃಷಿಯಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ: ಶಿವಕುಮಾರ್ 3


ವಿಜಯಪುರದಲ್ಲಿ ವೈದ್ಯಾಧಿಕಾರಿಗಳ ಸಮ್ಮೇಳನ: ಸದಸ್ಯತ್ವ ನೋಂದಣಿ 4



ಸುದ್ದಿ, ಜಾಹಿರಾತಿಗೆ 9686622252


## ನಾಯಕ ನೌಕರರ ಸಂಘಕ್ಕೆ 15 ವರ್ಷಗಳ ಸಂಭ್ರಮ

# ಸಂಘಟನೆಗೆ ಹೊಸ ಭಾಷ್ಯ ಬರೆದ ಡಾ.ಗುಡ್ಡದೇಶ್ವರಪ್ಪ



### ಎಲ್ಲಾರ ಸಹಕಾರವೇ ಯಶಸ್ಸಿನ ಗುಟ್ಟು: ಡಾ.ಹೆಚ್.ಗುಡ್ಡದೇಶ್ವರಪ್ಪ

ನಾಯಕ ಸಮಾಜದ ನೌಕರರು ಮತ್ತು ಸಮಾಜದ ಸಹಕಾರದಿಂದ 15 ವರ್ಷಗಳು ಪೂರ್ಣಗೊಳಿಸಿದ್ದೇನೆ. ನಾನು ಅಧ್ಯಕ್ಷನಾಗಿ ಸಮರ್ಥವಾಗಿ ನಿರ್ವಹಿಸಲು ಸಂಘದ ಎಲ್ಲಾರ ಸಹಕಾರ ಅಗತ್ಯವಾಗಿರುತ್ತದೆ. ಎಲ್ಲಾ ನೌಕರರು ಕೊಟ್ಟ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಾರೆ. ಅವರ ಜೊತೆಯಾಗಿ ನಾವು ಕೆಲಸ ಹಂಚಿಕೊಂಡು ಮಾಡುತ್ತೇವೆ. ನಮ್ಮ ಸಮಾಜದ ಋಣವನ್ನು ತೀರಿಸಲು ಸಿಕ್ಕಿರುವ ಎಲ್ಲಾ ಅವಕಾಶಗಳನ್ನು ಬಳಸಿಕೊಂಡರೆ ಮಾತ್ರ ನಾಯಕ ಸಮಾಜಕ್ಕೆ ನ್ಯಾಯ ಒದಗಿಸಿದಂತೆ ಆಗುತ್ತದೆ. ಹಿರಿಯರು ಮಾರ್ಗದರ್ಶನ, ಸಮಾಜ ಮುಖಂಡರ ಸಲಹೆ ಎಲ್ಲಾವೂ ಸುಧೀರ್ಘ ಹಾದಿ ಸವೆಸಲು ಸಾಧ್ಯವಾಯಿತು. ಮುಂದೆ ನಿಮ್ಮೆಲ್ಲರ ಪ್ರೀತಿ, ಸಹಕಾರ ಹೀಗೆ ಇರಲಿ..

» **ನಮ್ಮಜನ ವಿಶೇಷ**

ಚಿತ್ರದುರ್ಗ: ಸಮಾಜದಲ್ಲಿ ಅನೇಕ ಸಂಘಟನೆಗಳು ಹುಟ್ಟುತ್ತವೆ, ಸಾಯುತ್ತದೆ ಆದರೆ ಸಂಘಟನೆಗಳ ಉಳಿಯಬೇಕಾದರೆ ಶ್ರಮ ಅಗತ್ಯ ಒಗ್ಗಟ್ಟು,ಅಗತ್ಯ, ಹೊಂದಾಣಿಕೆ ಅಗತ್ಯ ಅಂತಹ ತತ್ವಗಳನ್ನು ಮನದಲಿಟ್ಟುಕೊಂಡು 15 ಪೂರ್ರೈಸಿದ ಹೆಗ್ಗಳಿಕೆ ಸಲ್ಲುತ್ತಿರುವುದು ಚಿತ್ರದುರ್ಗ ವಾಲ್ಮೀಕಿ ನಾಯಕ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘಕ್ಕೆ ಎಂದರೆ ತಪ್ಪಾಗಲಾರದು.

ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಕಳೆದ 15 ವರ್ಷಗಳಿಂದ ಚಿತ್ರದುರ್ಗ ವಾಲ್ಮೀಕಿ ನಾಯಕ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಸೇವೆ ಅವಿಸ್ಮರಣೀಯವಾಗಿದೆ.

ಜಿಲ್ಲೆಯ ನಾಯಕ ಸಮಾಜದ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಅವರಿಗೆ ಸನ್ಮಾನಿಸುವ ಮೂಲಕ ಗೌರವಿಸಿ ಮುಂದಿನ ಹೆಜ್ಜೆ ಇಡಲು ಪ್ರತಿ ವರ್ಷ ಆಯೋಜಿಸುವ ಕಾರ್ಯಕ್ರಮ ಪ್ರತಿಭಾ ಪುರಸ್ಕಾರವಾಗಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಇಂಜಿನಿಯರಿಂಗ್, ಪದವಿ ವಿಭಾಗದಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದಿರುವಂತಹ ಮಕ್ಕಳಿಗೆ ಸನ್ಮಾನಿಸುವ ಪದ್ಧತಿ ಅಳವಡಿಸಿಕೊಂಡು ಬರುತ್ತಿರುವುದು ಇಡೀ ಸಮಾಜಕ್ಕೆ ಸರ್ಕಾರಿ ನೌಕರರು ನೀಡುತ್ತಿರುವ ದೊಡ್ಡ ಗೌರವ ಎಂದರೆ ತಪ್ಪಾಗಲಾರದು .ನಾಯಕ ಸಮಾಜದ ನೌಕರರು ಸಮಾಜದ ಬಗ್ಗೆ ಸಾಕಷ್ಟು ಕಾಳಜಿ ಹೊಂದಿದ್ದು ನಾವು ಸಮಾಜದ ಮೀಸಲಾತಿ ಅಡಿಯಲ್ಲಿ ಕೆಲಸ ಪಡೆದಿದ್ದು ನಮ್ಮಿಂದ ಒಂದು ಚಿಕ್ಕ ಬದಲಾವಣೆ ಆದರೆ ಮಾತ್ರ ಜೀವನ ಸಾರ್ಥಕವಾಗುತ್ತದೆ. ಯುವ ಪೀಳಿಗೆಯನ್ನು ಜ್ಞಾನದ ಕಡೆಗೆ ನಾವೆಲ್ಲ ಅಣಿಗೊಳಿಸಿದರೆ ಮಾತ್ರ ನಾಯಕ ಸಮಾಜದ ಋಣ ತೀರಿಸಿದಂತೆ ಆಗುತ್ತದೆ ಎಂಬ ನಿಲುವನ್ನು ನಾಯಕ ಸಮಾಜದ ಸರ್ಕಾರಿ ನೌಕರರು ಹೊಂದಿರುವುದಕ್ಕೆ ಕಳೆದ 15 ವರ್ಷಗಳ ಸಂಘಟನೆಯೇ ಸಾಕ್ಷಿಯಾಗಿದೆ.

### ನಾಯಕರ ಸರ್ಕಾರಿ ನೌಕರರ ಸಂಘಕ್ಕೆ 15 ವರ್ಷ ಡಾ.ಹೆಚ್.ಗುಡ್ಡದೇಶ್ವರಪ್ಪ ನಾಯಕ

ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘವು ಕಳೆದ 15 ವರ್ಷಗಳ ಕಾಲ ಅಧ್ಯಕ್ಷರಾಗಿ ಮುನ್ನಡೆಸಿದ್ದು ಸರ್ಕಾರಿ ಮಹಿಳಾ ಪದವಿ ಕಾಲೇಜು ಪ್ರಾಂಶುಪಾಲರಾಗಿರುವ ಡಾ.ಹೆಚ್. ಗುಡ್ಡದೇಶ್ವರಪ್ಪ. ಡಾ.ಹೆಚ್.ಗುಡ್ಡದೇಶ್ವರಪ್ಪ ಅವರು ಸಂಘಟನೆಯಲ್ಲಿ ಸಾಕಷ್ಟು ನೂರಿತಿದ್ದರು. ಸಾವಿರಾರು ಮಕ್ಕಸಂ ಘ ಸಮಾಜಕ್ಕೆ ಪರಿಚಯಿಸಿದ್ದ ಉಪಾನ್ಯಾಸಕರಿಗೆ ಅಚ್ಚುಕಟ್ಟಾಗಿ ಸಂಘ ಕಟ್ಟುವುದು ಅವರಿಗೆ ಕಷ್ಟವೇ ಆಗಲಿಲ್ಲ. ಸದಾ ಶಿಸ್ತಿನ ಸಿಪಾಯಿಯಂತೆ ಸಂಘ ಕಟ್ಟಲು ದುಡಿದವರಿಗೆ ಹಲವು ಹಿರಿಯ ಮತ್ತು ಕಿರಿಯ ಅಧಿಕಾರಿಗಳ ವರ್ಗ ಸಾಥ್ ನೀಡಿದ್ದು ಮತ್ತಷ್ಟು ಯಶಸ್ಸುಗಳ ಜೊತೆ ಹೆಜ್ಜೆ ಹಾಕಲು ಸಾಧ್ಯವಾಗಿದೆ. ಸಮಾಜ ಸದಾ ಚಟುವಟಿಕೆಯಿಂದ ಕೂಡಿರಬೇಕು. ಸಮಾಜದಲ್ಲಿ ಒಗ್ಗಟ್ಟು ನೆಲೆಸಿರಬೇಕು. ಯಾವುದೇ ಫಲಪೇಕ್ಷೆಯಿಲ್ಲದೇ ಸಮಾಜಕ್ಕೆ ದುಡಿದರೆ ಸಮಾಜ ನಮಗೆ ಎಲ್ಲಾವನ್ನು ನೀಡುತ್ತದೆ ಎಂಬ ತತ್ವ ಮತ್ತು ತಮ್ಮ ಕೆಲಸದ ಜೊತೆ ಜೊತೆಗೆ ಯುವ ಸಮೂಹದ ದಾರಿ ದೀಪವಾಗಿ ಗುಡ್ಡದೇಶ್ವರಪ್ಪ ಅವರು ಕಾರ್ಯಕ್ಕೆ ಸಾಕಷ್ಟು ಜನರು ಮೆಚ್ಚುಗೆ ಮಾತುಗಳಾಡಿದರು ಅದು ನನ್ನ ಕರ್ತವ್ಯ, ಸಮಾಜ ನಮ್ಮದಲ್ವ ಎಂಬ ಮಾತಾಡಿ ನಕ್ಕು ಸುಮ್ಮನಾಗುವ ಗುಣ ಡಾ.ಗುಡ್ಡದೇಶ್ವರಪ್ಪ ಅವರನ್ನು ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಉತ್ತುಂಗ ಹುದ್ದೆಗಳನ್ನು ನಿರ್ವಹಿಸಿದಂತೆ ಮಾಡಿತು.

**ನೌಕರರ ಒಗ್ಗಟ್ಟಿನ ಬಲ :** ಸರ್ಕಾರಿ ನೌಕರರ ಸಂಘದಲ್ಲಿ ಎಲ್ಲಾ ನೌಕರರು ಒಗ್ಗಟ್ಟಿನ ಸಂಘಟನೆಮೂಲಕ ಸದೃಢ ಸಂಘವಾಗಿ ನಾಯಕ ನೌಕರರ ಸಂಘ ಹೊರಹೊಮ್ಮುತ್ತ ಸಾಗುತ್ತಿದೆ. ಒಂದು ಕೆಲಸವಾಗಲಿ ಅಥವಾ ಕಾರ್ಯಕ್ರಮವಾಗಲಿ ಹಿಡಿದರೇ ಎಲ್ಲಾರೂ ಒಕ್ಕೊರಲಿನಿಂದ ತಮ್ಮ ತಮ್ಮ ಕೆಲಸಗಳನ್ನು ಹಂಚಿಕೆ ಮಾಡಿಕೊಂಡು ಆ ಕೆಲಸ ಮಾಡಿ ಮುಗಿಸಿ ಯಶಸ್ವಿಗೊಳಿಸುವವರೆಗೆ ದಣಿವರಿಯಂತೆ ಕೆಲಸ ನಿರ್ವಹಿಸುತ್ತಾರೆ. ಈ ನೌಕರರು ಸಮಾಜದ ಮುಖಂಡರು ಸೇರಿ ಸರ್ವರನ್ನು ವಿಶ್ವಾಸಕ್ಕೆ ತೆಗೆದು ಕೊಂಡುಸರ್ಕಾರಿನಾಯಕನೌಕರರಸಂಘವನ್ನುಅಚ್ಚುಕಟ್ಟಾಗಿನಡೆಸಿಕೊಂಡುಹೋಗುವಹೊಣೆಗಾರಿಕೆ ಡಾ.ಗುಡ್ಡದೇಶ್ವರಪ್ಪ ಅವರು ಸಮರ್ಥವಾಗಿ ನಿರ್ವಹಿಸುತ್ತಿದ್ದು ಇವರ ನಾಯಕತ್ವದಲ್ಲಿ ನಾಯಕ ಸಮಾಜ ಮತ್ತು ಸರ್ಕಾರಿ ನೌಕರರಿಗೆ ಬಲ ತುಂಬಲಿ ಎಂಬ ಹೆಬ್ಬಯಕೆ ನಮ್ಮದಾಗಿದೆ.



ನಮ್ಮ ಸರ್ಕಾರಿ ನೌಕರರ ಸಂಘ ಉತ್ತಮ ಕೆಲಸಗಳನ್ನು ಮಾಡಿಕೊಂಡು ಬರುತ್ತಿದೆ. ವಿದ್ಯಾರ್ಥಿಗಳು ಮತ್ತು ಸಮಾಜದ ಸಾಧಕರನ್ನು ಗೌರವಿಸುತ್ತ ಬಂದಿದ್ದೇವೆ. ಡಾ.ಗುಡ್ಡದೇಶ್ವರಪ್ಪ ಅವರ ಸಂಘಟನೆಯಿಂದ ಬಲಿಷ್ಠ ಸಂಘವಾಗಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಳೆಯುತ್ತಿದೆ. ಮುಂದಿ ದಿನಗಳಲ್ಲಿ ಮತ್ತಷ್ಟು ಬಲಿಷ್ಠವಾಗಿ ಸಂಘ ಕಟ್ಟುವ ಕಡೆ ನಮ್ಮ ಹೆಜ್ಜೆ ಇಡುತ್ತಿದ್ದೇವೆ.

» **ಸಿ.ಜಿ.ಶ್ರೀನಿವಾಸ್ ಸಂಸ್ಥಾಪಕ ಅಧ್ಯಕ್ಷರು ಸರ್ಕಾರಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ**




### ಕ್ರೈಂ ಸ್ಪೇಷಲಿಸ್ಟ್ ಬಿಟಿವಿ ರಾಜುಗೆ ಸಮಾಜದ ಸಾಧಕ ಪ್ರಶಸ್ತಿ



ಪುಟ 4

### ಸ್ವಾವಲಂಬಿ ಜೀವನವೇ ನನಗೆ ಖುಷಿ ಎಂದ ಮಂಜುಳ



ಪುಟ 4

### ಕಿಲಾರಿ ಜೋಗಯ್ಯಗೆ ಸಾಧಕ ಪ್ರಶಸ್ತಿ



ಪುಟ 4




# ಡಿ.29ರಂದು ವಿಶ್ವಮಾನವ ದಿನಾಚರಣೆ: ಅರ್ಥಪೂರ್ಣ ಆಚರಣೆಗೆ ಸೂಚನೆ



ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ವಿಶ್ವ ಮಾನವ ದಿನಾಚರಣೆಯ ಪೂರ್ವಸಿದ್ಧತಾ ಸಭೆ ನಡೆಯಿತು.

» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ ವಿಶ್ವಮಾನವ ದಿನಾಚರಣೆಯನ್ನು ಇದೇ ಡಿಸೆಂಬರ್ 29ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ವಿಶ್ವ ಮಾನವ ದಿನಾಚರಣೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ವಿಶ್ವಮಾನವ ದಿನಾಚರಣೆ ಅಂಗವಾಗಿ ಕುವೆಂಪು ಅವರ ಸಾಹಿತ್ಯ, ಬರಹ ಹಾಗೂ ವಿಶ್ವಮಾನವ ಸಂದೇಶ ಕುರಿತು ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಹಾಗೂ ಪದವಿ ಕಾಲೇಜು ವಿದ್ಯಾರ್ಥಿಗಳಿಂದ ಪ್ರಬಂಧ ಸ್ಪರ್ಧೆ ಏರ್ಪಡಿಸಬೇಕು. ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲು ಅಗತ್ಯ ಕ್ರಮವಹಿಸಬೇಕು. ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಕೈಗೊಂಡು ಅರ್ಥಪೂರ್ಣವಾಗಿ ಜಯಂತಿ ಆಚರಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್ ಮಾತನಾಡಿ, ರಾಷ್ಟ್ರಕವಿ ಕುವೆಂಪು ಅವರ ಕುರಿತು ಹಿರಿಯೂರಿನ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಡಾ.ಎಸ್.ಮಾರುತಿ ಅವರಿಂದ ಉಪನ್ಯಾಸ ಹಾಗೂ ಗೀತಗಾಯನ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಹೇಳಿದರು. ಸಭೆಯಲ್ಲಿ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಚಿದಾನಂದ, ನಗರಸಭೆಯ ಪುಟ್ಟಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಜನವರಿ 01 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ 2025ರ ಜನವರಿ 01 ರಂದು ಜಿಲ್ಲಾ ಕೇಂದ್ರದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಆಚರಿಸುವ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು 2025ರ ಜನವರಿ 01 ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸರ್ಕಾರದ ಶಿಷ್ಟಾಚಾರ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿಧಿನಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಸಮಾರಂಭದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಕುರಿತು ಉಪನ್ಯಾಸ ಕಾರ್ಯಕ್ರಮ ಹಾಗೂ ಗೀತಗಾಯನ ಏರ್ಪಡಿಸಲಾಗುವುದು ಎಂದರು. ಅಮರಶಿಲ್ಪಿ ಜಕಣಾಚಾರಿ ಅವರು ನಾಡಿನ ಐತಿಹಾಸಿಕ ವಾಸ್ತುಶಿಲ್ಪ ಪರಂಪರೆಗೆ ಅಪಾರವಾದ ಕೊಡುಗೆ ನೀಡಿದ್ದಾರೆ. ಇಂತಹ ಮಹಾನ್ ವ್ಯಕ್ತಿಯ ಸಂಸ್ಮರಣಾ ದಿನಾಚರಣೆ ಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಸಮಾಜದ ಓರ್ವ ಶಿಲ್ಪಿಯನ್ನು ಸನ್ಮಾನಿಸಲು ಜಿಲ್ಲಾಡಳಿತದ ವತಿಯಿಂದ ಅವಕಾಶ ಕಲ್ಪಿಸಬೇಕು ಎಂದು ಸಮಾಜದ ಮುಖಂಡರು ಕೋರಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಉಪವಿಭಾಗಾಧಿಕಾರಿಗಳ ಕಚೇರಿಯ ನರಸಿಂಹಮೂರ್ತಿ, ಜಿಲ್ಲಾ ವಿಶ್ವಕರ್ಮ ಸಮಾಜದ ಕೆ.ಟಿ. ಸುರೇಶಾಚಾರ್, ಸಿ.ಆರ್.ಸುರೇಶ್, ಎ.ಶಂಕರಾಚಾರ್, ಗೋವರ್ಧನ, ಸುರೇಶ್, ಅನಿಲ್, ಮಲ್ಲಿಕಾರ್ಜುನಾಚಾರ್, ನರೇಂದ್ರಚಾರ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಸಂವಾದ ಕಾರ್ಯಕ್ರಮ

» **ಚಳ್ಳಕೆರೆ**

ಚಿತ್ರದುರ್ಗ ಜಿಲ್ಲಾ ಸಾಮಾಜಿಕ ನ್ಯಾಯಕ್ಕಾಗಿ ನಾಗರಿಕರು ವೇದಿಕೆಯಡಿ ಎಸ್ಸಿ, ಎಸ್ಟಿ ನಾಯಕರೊಂದಿಗೆ ಸಂವಿಧಾನ ಸನ್ಮಾನ ಅಭಿಯಾನ ಸಂವಾದಕಾರ್ಯಕ್ರಮವನ್ನು ಡಿ.30ರಸೋಮವಾರ ಬೆಳಗ್ಗೆ 10.30ಕ್ಕೆ ನಗರದ ಛೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ವಾಲ್ಮೀಕಿ ಸಮುದಾಯದ ಹಿರಿಯ ಮುಖಂಡ ಬಾಳೆಮಂಡಿರಾಮದಾಸ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಸಂವಾದ ಕಾರ್ಯಕ್ರಮದಲ್ಲಿ ಮಾಜಿ ಶಾಸಕರು, ಸಂವಿಧಾನದ ಬಗ್ಗೆ ಅಧ್ಯಯನ ನಡೆಸಿರುವ ಎನ್.ಮಹೇಶ್, ಮೈಸೂರಿನ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್‌ಕುಮಾರ್, ಬೆಂಗಳೂರಿನ ಪ್ರಜ್ಞಾವಂತ ಲೇಖಕ ವಾದಿರಾಜ್ ಭಾಗವಹಿಸುವರು ಎಂದು ತಿಳಿಸಿದ್ದಾರೆ.

### ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

» **ಚಿತ್ರದುರ್ಗ**

ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗದ ಅಧಿಕಾರಿಗಳು ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ಡಿ. 23ರಂದು ಲೋಕಾಯುಕ್ತ ಪೊಲೀಸ್ ನಿರೀಕ್ಷಕರು, ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಮೊಳಕಾಲ್ಮುರು ತಾಲ್ಲೂಕು ಕಚೇರಿಯಲ್ಲಿ ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಅದೇ ದಿನ ಪೊಲೀಸ್ ಉಪಾಧೀಕ್ಷಕರು, ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ, ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಡಿ. 24ರಂದು ಪೊಲೀಸ್ ನಿರೀಕ್ಷಕರು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾಲ್ಲೂಕು ಕಚೇರಿಯಲ್ಲಿ, ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಕೆಲಸಗಳನ್ನು ಮಾಡಿಕೊಡಲು ಅಧಿಕಾರಿ, ಸಿಬ್ಬಂದಿ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ, ಇತ್ಯಾದಿ ವಿಷಯಗಳ ದೂರುಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗದಿತ ನಮೂನೆ-1 ಮತ್ತು 2 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚರ್ಮದ ಬ್ರಾಂಡೆಡ್ ಉತ್ಪನ್ನಗಳು ರಿಯಾಯತಿ ದರದಲ್ಲಿ ಮಾರಾಟ

» **ಚಿತ್ರದುರ್ಗ**

ಜಿಲ್ಲೆಯ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಲಿಡ್ಕರ್ ಲೆದರ್ ಎಂಪೋರಿಯಂ ಮಾರಾಟ ಮಳಿಗೆಯಲ್ಲಿ ಇದೇ ಡಿ. 20 ರಿಂದ ಜನವರಿ 05 ರವರೆಗೆ ಕ್ರಿಸ್‌ಮಸ್ ಮತ್ತು 2025ನೇ ಹೊಸ ವರ್ಷದ ಪ್ರಯುಕ್ತ ಶೇ.20 ಮತ್ತು ಆಯ್ದ ದಾಸ್ತಾನುಗಳಿಗೆ ಶೇ.40 ರವರೆಗೆ ಅತ್ಯುತ್ತಮ ಗುಣಮಟ್ಟದ ಅಪ್ಪಟ ಚರ್ಮದ ಬ್ರಾಂಡೆಡ್ ಉತ್ಪನ್ನಗಳು ರಿಯಾಯಿತಿ ದರದಲ್ಲಿ ದೊರೆಯುತ್ತವೆ. ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-226651, 9449181136 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಲಿಡ್ಕರ್ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 23ರಂದು ಬಸವೇಶ್ವರ ಕಾರ್ತಿಕೋತ್ಸವ

» **ದಾವಣಗೆರೆ**

ನಗರದ ಕಾಯಿಪೇಟೆಯ ಶ್ರೀ ಬಸವೇಶ್ವರ ದೇವಸ್ಥಾನ ಸೇವಾ ಸಂಘದ ವತಿಯಿಂದ ನಾಡಿದ್ದು ದಿನಾಂಕ 23ರ ಸೋಮವಾರ 9 ಗಂಟೆಗೆ ಕಡೆ ಕಾರ್ತಿಕೋತ್ಸವ ನಡೆಯಲಿದೆ. 24ರ ಮಂಗಳವಾರ ಮತ್ತು 25ರ ಬುಧವಾರ ನಗರದ ಪಿ.ಬಿ. ರಸ್ತೆಯ ಪೂಜಾ ಇಂಟರ್‌ನ್ಯಾಷನಲ್ ಪಕ್ಕದಲ್ಲಿರುವ ಶ್ರೀ ಮಹೇಶ್ವರ ಸ್ವಾಮಿಯ ನಿವೇಶನದಲ್ಲಿ ಶ್ರೀ ಮಹೇಶ್ವರ ಸ್ವಾಮಿಯ ಜಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಬಸವೇಶ್ವರ ದೇವಸ್ಥಾನ ಸೇವಾ ಸಮಿತಿ ತಿಳಿಸಿದೆ. ವಿಶೇಷ ಸೂಚನೆ : ಶ್ರೀ ಕರಿಯಾಂಬಿಕಾ ದೇವಿ ಭಜನಾ ಮಂಡಳಿ, ಕ್ಯಾರೆಕಟ್ಟೆ ಹರಪನಹಳ್ಳಿ ಇವರಿಂದ ಎರಡು ದಿವಸ ರಾತ್ರಿ 10 ರಿಂದ ಭಜನಾ ಕಾರ್ಯಕ್ರಮವಿರುತ್ತದೆ.

### ಆಂಧ್ರಾ ಮೂಲದ ವ್ಯಕ್ತಿಯ ಭೀಕರ ಕೊಲೆ

» **ಪರಶುರಾಂಪುರ**

ಹೋಬಳಿವ್ಯಾಪ್ತಿಯನಾಗಪ್ಪನಹಳ್ಳಿಗೇಟ್‌ಸಮೀಪದ ಜಮೀನಿನಲ್ಲಿ ಆಂಧ್ರ ಮೂಲದ ವ್ಯಕ್ತಿಯೊಬ್ಬನನ್ನು ತಲೆಗೆ ಹರಿತವಾದ ಆಯುಧಗಳಿಂದ ಬಲವಾಗಿ ಹೊಡೆದು ಭೀಕರವಾಗಿ ಕೊಲೆ ಮಾಡಿರುವ ಘಟನೆ ನಡೆದಿದೆ. ಗಿತ್ತರಾಜು(28) ಕೊಲೆಯಾದ ದುರ್ದೈವಿ. ಮೃತ ವ್ಯಕ್ತಿಯನ್ನು ಕಲ್ಯಾಣದುಗ9 ತಾಲೂಕಿನ ಕುಂದರ್ಪಿ ಮಂಡಲ್, ವಡ್ಡೆಪಾಳ್ಯಂ ಗ್ರಾಮ ಎಂದು ಗುರುತಿಸಲಾಗಿದೆ.

## ಚಿತ್ರದುರ್ಗ: ತಾಪಂ ಕಚೇರಿಯಲ್ಲಿ ಸ್ವಚ್ಛತಾ ಕಾರ್ಯ

» **ಚಿತ್ರದುರ್ಗ**




ಸ್ವಚ್ಛ ಭಾರತದ ಪರಿಕಲ್ಪನೆಯ ನನಸಿನ ಒಂದು ಹೆಜ್ಜೆಯಾಗಿ ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಅಧಿಕಾರಿ ಮತ್ತು ಸಿಬ್ಬಂದಿಗಳಿಂದ ಕಚೇರಿ ಒಳ ಮತ್ತು ಹೊರ ಆವರಣದ ಸ್ವಚ್ಛತಾ ಕಾರ್ಯ ಮಾಡಿದರು.

ಚಿತ್ರದುರ್ಗ ನಗರದ ತಾಲ್ಲೂಕು ಪಂಚಾಯಿತಿಯಲ್ಲಿ ಶನಿವಾರ ಸ್ವಚ್ಛ ಭಾರತ ಯೋಜನೆಯಡಿ ಸ್ವಚ್ಛ ಶನಿವಾರ ಕಾರ್ಯಕ್ರಮ-ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ ಅಭಿಯಾನದ ಅಂಗವಾಗಿ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿಗಳು ಸತತ ಎರಡು ಗಂಟೆಗಳ ಕಾಲ ಸ್ವಚ್ಛತಾ ಕಾರ್ಯ ನಡೆಸಿದರು.

ಈ ವೇಳೆ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ.ರವಿಕುಮಾರ್, ಪ್ರಧಾನ ಮಂತ್ರಿಗಳ ಸ್ವಚ್ಛ ಭಾರತದ ಕನಸಿನ ಸಾಕಾರಕ್ಕೆ ನಾವೆಲ್ಲರೂ ಸ್ವಯಂ ಪ್ರೇರಿತವಾಗಿ ಭಾಗವಹಿಸಿ, ದೇಶದ ಸ್ವಚ್ಛತೆಗೆ ಕೈ ಜೋಡಿಸಲು ಪ್ರತಿ ಶನಿವಾರ ಒಂದು ಗಂಟೆ ಸ್ವಚ್ಛತಾ ಶ್ರಮದಾನಕ್ಕೆ ಮೀಸಲಿಡಬೇಕಿದೆ ಎಂದು ಹೇಳಿದರು.ಈಗಾಗಲೇ ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛ ಶನಿವಾರ ಚಾಲನೆಯಲ್ಲಿದ್ದು, ಸ್ವಚ್ಛತೆ ಮತ್ತು ಹೆಚ್ಚಿನ ಜಾಗೃತಿಗೆ ಗ್ರಾಮ ಪಂಚಾಯತಿ ಅಧಿಕಾರಿಗಳು ವಾರದ ಮೊದಲೇ ಒಂದು ಗ್ರಾಮವನ್ನು ಆಯ್ಕೆ ಮಾಡಿ, ತಮ್ಮ ಸಿಬ್ಬಂದಿಗಳೊಂದಿಗೆ ಸ್ಥಳೀಯ ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರನ್ನು ಒಡಗೂಡಿಸಿಕೊಂಡು ಸ್ವಚ್ಛತೆಗೆ ಶ್ರಮದಾನ ಮಾಡುತ್ತಾ ಸ್ವಚ್ಛ ಭಾರತದ ಕನಸು ಸಾಕಾರಗೊಳಿಸಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ತಾಲ್ಲೂಕು ಲೆಕ್ಕಾಧಿಕಾರಿ ಕೆಂಚಪ್ಪ, ತಾಲ್ಲೂಕು ಯೋಜನಾಧಿಕಾರಿ ರಾಘವೇಂದ್ರ, ನರೇಗಾ ಮತ್ತು ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರಾದ ಹೆಚ್.ಎರ್ರಿಸ್ವಾಮಿ, ಆರ್. ರೂಪಾಕುಮಾರಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಗುರುರಾಜ್, ವ್ಯವಸ್ಥಾಪಕ ಇರ್ಫಾನ್, ಅಧಿಕಾರಿಗಳಾದ ನಾಸಿರ್, ಮಹಾಲಕ್ಷ್ಮೀ, ತಾಂತ್ರಿಕ ಸಂಯೋಜಕ ಪ್ರತಾಪ್, ಎಂಐಎಸ್ ಉಮೇಶ್, ಐಇಸಿ ಸತ್ಯನಾರಾಯಣ ಸೇರಿದಂತೆ ನಗರಸಭೆ ಪೌರಕಾರ್ಮಿಕರು ಇದ್ದರು.

## ಸಿ.ಟಿ.ರವಿ ವಿರುದ್ಧ ಲಕ್ಷ್ಮಿಹೆಬ್ಬಾಳ್ಕರ್ ಅಭಿಮಾನಿಗಳಿಂದ ಪ್ರತಿಭಟನೆ



» **ಚಿತ್ರದುರ್ಗ**

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿಹೆಬ್ಬಾಳ್ಕರ್‌ಗೆ ಅಸಾಂವಿಧಾನಿಕ ಮಾತುಗಳನ್ನಾಡಿರುವ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ವಿರುದ್ಧ ಲಕ್ಷ್ಮಿಹೆಬ್ಬಾಳ್ಕರ್ ಅಭಿಮಾನಿಗಳ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಲಾಯಿತು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ಸಿ.ಟಿ.ರವಿ ವಿರುದ್ಧ ಧಿಕ್ಕಾರಗಳನ್ನು ಕೂಗಿದರು.ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಕೊನೆಯ ದಿನದ ಅಧಿವೇಶನದಲ್ಲಿ ಸಿ.ಟಿ.ರವಿ ಆಡಿರುವ ಮಾತು ಲಕ್ಷ್ಮಿಹೆಬ್ಬಾಳ್ಕರ್ ಮನಸ್ಸಿಗೆ ಘಾಸಿಯುಂಟು ಮಾಡಿದೆ. ಆದ್ದರಿಂದ ಸಿ.ಟಿ.ರವಿಯನ್ನು ವಿಧಾನಪರಿಷತ್ ಸದಸ್ಯತ್ವ ಸ್ಥಾನದಿಂದ ವಜಾಗೊಳಿಸಿ ಜೈಲಿಗಟ್ಟಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.ಪ್ರತಿಭಟನೆ ನೇತೃತ್ವ ವಹಿಸಿದ್ದ ಪಂಚಮಸಾಸಲಿ ಅಧ್ಯಕ್ಷ ಹೆಚ್.ಎಂ.ಮಂಜುನಾಥ್ ದಾಳಿಂಬೆ ಮಾತನಾಡಿ ಕೇಂದ್ರ ಗೃಹ ಸಚಿವ ಅಮಿತ್‌ಷಾ ಅಂಬೇಡ್ಕರ್ ಹೆಸರೇಳುವ ಬದಲು ದೇವರ ಹೆಸರು ಜಪಿಸಿ ಸ್ವರ್ಗ ಪ್ರಾಪ್ತಿಯಾಗುತ್ತದೆಂದು ಹೇಳಿರುವ ಬೆನ್ನ ಹಿಂದೆಯೆ ಸಿ.ಟಿ.ರವಿ ಅಸಭ್ಯವಾಗಿ ಮಾತನಾಡಿರುವುದನ್ನು ನೋಡಿದರೆ ಇವರಿಬ್ಬರು ಮನುಸ್ಮೃತಿಯವರು ಎನ್ನುವುದು ಗೊತ್ತಾಗುತ್ತದೆ. ಹಾಗಾಗಿ ಇವರುಗಳು ತಕ್ಷಣವೆ ರಾಜಿನಾಮೆ ನೀಡಬೇಕೆಂದು ಒತ್ತಾಯಿಸಿದರು.

ಕರವೇ ರಮೇಶ್, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಶ್ರೀರಾಮ್, ಹನೀಸ್, ಕಾರ್ತಿಕ್, ಮೋಕ್ಷರುದ್ರಸ್ವಾಮಿ, ಮುನಿರಾ ಎ.ಮಕಾಂದಾರ್, ವಿಜಯಕುಮಾರ್, ನೇತ್ರಾವತಿಕುಮಾರ್, ಗಿರೀಶ್, ಜಗದೀಶ್, ದರ್ಶನ್, ಸುನಿತ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



## ಅನ್ನೇಹಾಳ್ ಗ್ರಾಮ ಪಂಚಾಯಿತಿಗೆ ಅಧ್ಯಕ್ಷ-ಉಪಾಧ್ಯಕ್ಷರ ಅವಿರೋಧ ಆಯ್ಕೆ

**ಚಿತ್ರದುರ್ಗ:** ಅನ್ನೆಹಾಳ್ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ವೀಣ ಅಜ್ಜಪ್ಪ, ಉಪಾಧ್ಯಕ್ಷೆ ಎನ್.ತನುಜ ನಾಗರಾಜು ಇವರುಗಳನ್ನು ಪ್ರವಾಸಿ ಮಂದಿರದಲ್ಲಿ ಶನಿವಾರ ಅಭಿನಂದಿಸಲಾಯಿತು. ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹೆಚ್.ನಿರಂಜನಮೂರ್ತಿ, ಸದಸ್ಯರುಗಳಾದ ಎಂ.ತಿಮ್ಮಯ್ಯ ಶುಭ ಕೋರಿದರು.

**ಪ್ರಮುಖ ಸುದ್ದಿ**

### ಟಿಬಿ ಮುಕ್ತ ಭಾರತ ನಿರ್ಮಾಣ: ತೀವ್ರ ಪ್ರಚಾರಾಂದೋಲನ

# ಕ್ಷಯ ರೋಗದ ಅಪಾಯ ಇರುವವರ ಆರೈಕೆ ಮಾಡಿ

» **ಚಿತ್ರದುರ್ಗ**

ಕ್ಷಯ ಮುಕ್ತ ಭಾರತ ಗುರಿ ತಲುಪಿಸುವ ಪ್ರಮುಖ ಹೆಜ್ಜೆಯಾಗಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ ದೇಶಾದ್ಯಂತ ಹಮ್ಮಿಕೊಂಡಿದ್ದು, ಜಿಲ್ಲೆಯಾದ್ಯಂತ 2025ರ ಮಾರ್ಚ್ 17 ರವರೆಗೆ ಕಾರ್ಯಕ್ರಮ ನಡೆಯಲಿದ್ದು, ಕ್ಷಯ ರೋಗದ ಅಪಾರ ಇರುವವರನ್ನು ಆರೈಕೆ ಮಾಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.



ನಗರದಜಿಲ್ಲಾಕಾರಾಗೃಹದಆವರಣದಲ್ಲಿ ಗುರುವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾರಾಗೃಹ ಇಲಾಖೆ ಇವರ ಸಹಯೋಗದೊಂದಿಗೆ 100 ದಿನಗಳ ಟಿಬಿ ಮುಕ್ತ ಭಾರತ ನಿರ್ಮಾಣ ತೀವ್ರ ಪ್ರಚಾರ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

2025ರ ಹೊತ್ತಿಗೆ ವಾರ್ಷಿಕ ಹೊಸ ಕ್ಷಯರೋಗ ಪ್ರಮಾಣವನ್ನು ರೂ. 1 ಲಕ್ಷ ಜನಸಂಖ್ಯೆಗೆ 47 ಪ್ರಕರಣಗಳಷ್ಟು ಕಡಿಮೆ ಮಾಡುವುದು. ಕ್ಷಯದಿಂದ ಮರಣ ಪ್ರಮಾಣವನ್ನ ಶೇ.3.6 ಕಡಿಮೆ ಮಾಡುವ ಹಾಗೂ ಕ್ಷಯರೋಗದಿಂದ ರೋಗಿಯ ಕುಟುಂಬಕ್ಕೆ ಆಗುವ ಆರ್ಥಿಕ ವೆಚ್ಚ ಶೂನ್ಯ ಮಾಡುವ ಧ್ಯೇಯ, ಗುರಿಗಳನ್ನು ಹೊಂದಲಾಗಿದೆ. ಸದ್ಯ ಭಾರತದಲ್ಲಿ ಪ್ರತಿವರ್ಷ 28.4 ಲಕ್ಷ ಜನ ಕ್ಷಯ ರೋಗಕ್ಕೆ ತುತ್ತಾಗುತ್ತಿದ್ದು, 5 ಲಕ್ಷ ಜನ ಕ್ಷಯದಿಂದ ಮೃತರಾಗುತ್ತಿದ್ದಾರೆ ಎಂದು ಹೇಳಿದರು.

ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಕ್ಷಯ ತಗಲುವ ಸಾಧ್ಯತೆ ಹೆಚ್ಚಿರುವ ಪ್ರದೇಶಗಳಲ್ಲಿ ಆರೋಗ್ಯ ತಂಡಗಳು ಹೈ ರಿಸ್ಕ್ ಪ್ರದೇಶಗಳಿಗೆ ತೆರಳಿ, ಕ್ಷಯರೋಗದ ಬಗ್ಗೆ ಮಾಹಿತಿ ಮತ್ತು ಜನಜಾಗೃತಿ ಮೂಡಿಸುತ್ತದೆ. ಕ್ಷಯರೋಗ ಲಕ್ಷಣಗಳು ಕಂಡುಬಂದಲ್ಲಿ ಕಫ ಪರೀಕ್ಷೆ, ಅಥವಾ ಸಿಬಿ ನಾಟ್ ಪರೀಕ್ಷೆಯ ಮುಖಾಂತರ ಕ್ಷಯ ರೋಗವನ್ನು ಪತ್ತೆ ಹಚ್ಚಿ ಚಿಕಿತ್ಸೆ ನೀಡಲಾಗುತ್ತದೆ.

ಚಿತ್ರದುರ್ಗ ತಾಲೂಕಿನ ಒಟ್ಟು 286 ಹಳ್ಳಿಗಳಲ್ಲಿ ದಿನಕ್ಕೆ ನಾಲ್ಕು ಹಳ್ಳಿಗಳನ್ನು ಭೇಟಿ ಮಾಡಿ ವಾಹನದ ಮೂಲಕ ವೈದ್ಯಾಧಿಕಾರಿಗಳು, ಪ್ರಯೋಗಶಾಲಾ ತಂತ್ರಜ್ಞರು, ಆಶಾ ಕಾರ್ಯಕರ್ತೆಯರು, ರೋಗಿಗಳ ಸ್ಕ್ರೀನಿಂಗ್ ಕಫ ಪರೀಕ್ಷೆ, ಎಕ್ಸ್ ರೇ ಪರೀಕ್ಷೆ, ಉಚಿತ ಚಿಕಿತ್ಸೆ, ಉನ್ನತ ಮಟ್ಟದ ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಗೆ ನಿರ್ದೇಶನ ಮಾಡಲಾಗುತ್ತಿದೆ. ಹಾಗೆಯೇ ಕ್ಷಯರೋಗದ ಬಗ್ಗೆ ಹೆಚ್ಚಿನ ಜಾಗೃತಿ ಮತ್ತು ಜನರು ಕ್ಷಯರೋಗ ಪತ್ತೆಗೆ ಶೀಘ್ರ ತಪಾಸಣೆ ಹಾಗೂ ಚಿಕಿತ್ಸೆಗೆ ಮುಂದಾಗುವ ಮನಸ್ಥಿತಿ ಮೂಡಿಸುವುದಾಗಿದೆ ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ್ ಮಾತನಾಡಿ, ಮನೆ ಮನೆಗೆ ಭೇಟಿ ನೀಡುವ ಆರೋಗ್ಯ ತಂಡಗಳು ಎರಡು ವಾರಕ್ಕಿಂತ ಹೆಚ್ಚಿನ ಕೆಮ್ಮು ಜ್ವರ ಅತಿಯಾದ ತೂಕ ಇಳಿಕೆ ಕಫದಲ್ಲಿ ರಕ್ತ ಬೀಳುವುದು ಕುತ್ತಿಗೆಯಲ್ಲಿ ಗಂಟುಗಳು ಹಾಗೂ ಪೂರ್ವದಲ್ಲಿ ಕ್ಷಯರಗಕ್ಕೆ ಚಿಕಿತ್ಸೆ ಪಡೆದಿರುವುದು ಮುಂತಾದ ಕ್ಷಯಕ್ಕೆ ಸಂಬಂಧಿಸಿದ ಲಕ್ಷಣಗಳ ಕುರಿತು ತಪಾಸಣೆ ನಡೆಸುತ್ತಾರೆ ಹಾಗೂ ಕಫ ಪರೀಕ್ಷೆ, ಎಕ್ಸ್ ರೇ ಪರೀಕ್ಷೆಯ ಅಃಓಓಂಖ ಪರೀಕ್ಷೆಗಳ ಮುಖಾಂತರ ರೋಗ ಪತ್ತೆ ಹಚ್ಚಲಾಗುತ್ತಿದೆ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮೂಗಪ್ಪ ಜಾಗೃತಿ ಗೀತೆಯನ್ನು ಹಾಡುವ ಮೂಲಕ ಮಾಹಿತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಬುದ್ಧನಗರ ನಗರ ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಸುರೇಂದ್ರ, ಸಹಾಯಕ ಜೈಲರ್ ಬಿ.ಆರ್.ಚಲವಾದಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್, ಮೇಲ್ವಿಚಾರಕರಾದ ನಾಗರಾಜ್, ಸಂತೋಷ್, ಲೋಕೇಶ್, ನಿಂಗೇಶ್, ರಮೇಶ್, ಕಾರಾಗೃಹ ನಿವಾಸಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಸಿ.ಟಿ ರವಿ ಮೇಲೆ ಹಲ್ಲೆಗೆ ಯತ್ನ: ಅಕ್ರೋಶ

» **ಚಿತ್ರದುರ್ಗ**

ಬೆಳಗಾವಿ ಸುವರ್ಣಸೌಧದಲ್ಲಿ ಬಿಜೆಪಿ ಮುಖಂಡ ವಿಧಾನ ಪರಿಷತ್ ಸದಸ್ಯರಾದ ಸಿ. ಟಿ ರವಿ ರವರ ಮೇಲೆ ಕಾಂಗ್ರೆಸ್ ಗುಂಡಾಗಳು ಹಲ್ಲೆಗೆ ಯತ್ನ ನಡೆಸಿ ಕೊಲೆ ಬೆದರಿಕೆ ಹಾಕಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು ಇದು ಹೇಡಿಗಳ ಕೃತ್ಯ ಎಂದು ಬಿಜೆಪಿ ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ ತೀವ್ರವಾಗಿ ಖಂಡಿಸಿದ್ದಾರೆ. ಲಕ್ಕಿ ಹೆಬ್ಬಾಳ್ಕರ್ ಬೆಂಬಲಿಗರ ಗುಂಡಾ ವರ್ತನೆ ಬಿಜೆಪಿ ಪಕ್ಷ ಸಹಿಸಲ್ಲ ಅಂಥವರನ್ನು ಒದ್ದು ಒಳಗೆ ಹಾಕಿ ಕಾನೂನು ಪ್ರಕಾರ ಕ್ರಮ ಪ್ರಕರಣವನ್ನು ದಾಖಲಿಸಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕೆಂದು ನಾಗರಾಜ್ ಬೇದ್ರೇ ಹೇಳಿದ್ದಾರೆ.ರಾಜ್ಯದಲ್ಲಿ ಕಾನೂನು ಸಂಪೂರ್ಣ ಹದಗೆಟ್ಟು ಹೋಗಿದೆ ಜನಪ್ರತಿನಿಧಿಗಳಿಗೆ ರಕ್ಷಣೆ ಇಲ್ಲದ ಮೇಲೆ ಸಾರ್ವಜನಿಕರಿಗೆ ಎಲ್ಲಿ ರಕ್ಷಣೆ ಈ



ಸರ್ಕಾರ ನೀಡುತ್ತದೆ. ನಿನ್ನೆ ರಾತ್ರಿ ಬಂಧಿಸಿ ಖಾನಾಪುರ್ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿ ನ್ಯಾಯಾಧೀಶರ ಮುಂದೆ ಆದರೂ ಪಡಿಸುವುದನ್ನು ಬಿಟ್ಟು ತದನಂತರ ಬೆಂಗಳೂರಿಗೆ ಕರೆದುಕೊಂಡು ಹೋಗುವುದಾಗಿ ಹೇಳಿದ ಪೊಲೀಸರು ಸಿಟಿ ರವಿಯವರು ಏನು ಭಯೋತ್ಪಾದಕರ ಬಂಧಿಸಿದ ರೀತಿ ಪೊಲೀಸರು ವರ್ತಿಸಿದ್ದಾರೆ ಅದನ್ನು ಬಿಟ್ಟು ಮೂರ್ನಾಲ್ಕು ಜಿಲ್ಲೆಗಳ ಠಾಣೆಗಳನ್ನು ರಾತ್ರಿ ಇಡಿ ಸುತ್ತಾಡಿಸಿ ಪೊಲೀಸರು ಮಾನಸಿಕ ಹಿಂಸೆ ನೀಡಿ ಹಲ್ಲೆ ಮಾಡಿದ್ದು ಅಕ್ಷಮ್ಯ ಅಪರಾಧ ಸಿನಿಮೆಯ ರೀತಿ ಪೊಲೀಸರು ವರ್ತಿಸಿದ್ದಾರೆ ಎಂದು ನಾಗರಾಜ್ ಬೇದ್ರೇ ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಸರ್ಕಾರದ ಆಣತಿಯಂತೆ ಪೊಲೀಸರು ಕಾರ್ಯನಿರ್ವಹಿಸಿದ್ದು ಈ ಸರ್ಕಾರವನ್ನು ನಾವು ಯಾವ ದೇಶದಲ್ಲಿದ್ದೇವೆ ಎಂದು ಪ್ರಶ್ನಿಸಬೇಕಾಗುತ್ತದೆ ಒಬ್ಬ ಜನಪ್ರತಿನಿಧಿಯೊಂದಿಗೆ ನಡೆದುಕೊಂಡರೆ ಪೊಲೀಸರು ಸರ್ಕಾರ ಅಧಿಕಾರದ ದುರ್ಬಳಕೆಯನ್ನು ಮಾಡಿಕೊಳ್ಳುತ್ತಿದೆ ಇದರ ವಿರುದ್ಧ ರಾಜಾದ್ಯಂತ ಭಾರತೀಯ ಜನತಾ ಪಾರ್ಟಿ ಸರ್ಕಾರದ ಧೋರಣೆಯನ್ನು ಖಂಡಿಸಿ ಹೋರಾಟ ಮಾಡಲಿದೆ ಎಂದು ಹೇಳಿದ್ದಾರೆ.

### ವಿದ್ಯಾರ್ಥಿ ವೇತನಕ್ಕೆ ಇ-ಕೆವೈಸಿ ನೊಂದಣಿ ಕಡ್ಡಾಯ

» **ಚಿತ್ರದುರ್ಗ**

2024–25ನೇ ಸಾಲಿಗೆ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿವೇತನ ಅಭಿಯಾನ ಕೈಗೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. 2024–25ನೇ ಸಾಲಿನಿಂದ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಆಧಾರ್‌ಆಧಾರಿತಬಯೋಮೆಟ್ರಿಕ್‌ಅಥೆಂಟಿಕೇಷನ್ ಅಂಡ್ ಇ–ಕೆವೈಸಿ ಕಡ್ಡಾಯವಾಗಿದೆ. ಈ ಸಂಬಂಧ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲಾಗಿದ್ದು, ಎಲ್ಲಾ ಅರ್ಹ ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಎಲ್ಲಾ ಅರ್ಹ ಫಲಾನುಭವಿಗಳು ಸಕಾಲದಲ್ಲಿ ಇ–ಕೆವೈಸಿ ನೊಂದಣಿ ಮಾಡಿಸಲು ಕೋರಿದೆ. ಚಿತ್ರದುರ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲಾ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ವಿದ್ಯಾರ್ಥಿಗಳಿಂದ ಅರ್ಜಿ ಪಡೆಯಲು ಹಾಗೂ ಇ–ಕೆವೈಸಿ ಮಾಡಲು ಫೆಸಿಲಿಟೇಷನ್ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಪುಶಾಸನ್ ಗಾಂವ್ ಕಿ ಓರ್ ಅಭಿಯಾನ: ಸಾರ್ವಜನಿಕರ ಕುಂದು ಕೊರತೆ ಪರಿಹಾರಕ್ಕೆ ವಿಶೇಷ ಶಿಬಿರ ಆಯೋಜನೆ

» **ಚಿತ್ರದುರ್ಗ**

ಭಾರತ ಸರ್ಕಾರದ ಆಡಳಿತ ಸುಧಾರಣೆಗಳು ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆ ನಿರ್ದೇಶನದಂತೆ 2024ನೇ ಡಿಸೆಂಬರ್ 19 ರಿಂದ 24 ರ ಅವಧಿಯಲ್ಲಿ "ಪುಶಾಸನ್ ಗಾಂವ್ ಕಿ ಓರ್" ಅಭಿಯಾನದ ಆಚರಣೆಗಳಿಗಾಗಿ ವಾರದ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಗಳು ಅಭಿಯಾನದ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ವಿಶೇಷ ಶಿಬಿರಗಳನ್ನು ಆಯೋಜಿಸಿ ಸಾರ್ವಜನಿಕ ಕುಂದುಕೊರತೆಯ ಅಹವಾಲನ್ನು ಸ್ವೀಕರಿಸಿ ಇತ್ಯರ್ಥಪಡಿಸಬೇಕಾಗಿರುವುದರಿಂದ ಜಿಲ್ಲಾಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿಯಶಸ್ವಿಗೊಳಿಸಬೇಕು.ಸಾರ್ವಜನಿಕರು ಈ ಕಾರ್ಯಕ್ರಮದ ಉದ್ದೇಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

---

**ರೇಷ್ಮೆ ಕೃಷಿ ಮೇಳ ಕಾರ್ಯಕ್ರಮದಲ್ಲಿ ಕೇಂದ್ರ ರೇಷ್ಮೆ ಮಂಡಳ ಸದಸ್ಯ ಕಾರ್ಯದರ್ಶಿ ಪಿ.ಶಿವಕುಮಾರ್**

# ರೇಷ್ಮೆ ಕೃಷಿಯಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ

» **ಚಿತ್ರದುರ್ಗ**

ರೇಷ್ಮೆ ಕೃಷಿ ಉತ್ಪಾದನೆಯಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯ ಮೊದಲಿನಿಂದಲೂ ಪ್ರಥಮ ಸ್ಥಾನದಲ್ಲಿದೆ ಎಂದು ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಕಾರ್ಯದರ್ಶಿ ಪಿ.ಶಿವಕುಮಾರ್ ಹೇಳಿದರು.

ನಗರದ ಎಸ್.ಜೆ.ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಕೇಂದ್ರ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಕೇಂದ್ರ ರೇಷ್ಮೆ ಮಂಡಳಿ ಜವಳಿ ಸಚಿವಾಲಯ ಮತ್ತು ರೇಷ್ಮೆ ಇಲಾಖೆ ವತಿಯಿಂದ ರೇಷ್ಮೆ ಕೃಷಿ–ಐಸಿರಿಗೆ ದಾರಿ ಎಂಬ ವಿಷಯದೊಂದಿಗೆ ಹಮ್ಮಿಕೊಂಡಿದ್ದ "ರೇಷ್ಮೆ ಕೃಷಿ ಮೇಳ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶ ಎಲ್ಲ ಭಾಗಗಳ ರೇಷ್ಮೆ ಕೃಷಿ ನೋಡುವುದರ ಸಲುವಾಗಿ ಕೇಂದ್ರ ರೇಷ್ಮೆ ಮಂಡಳಿ ಸ್ಥಾಪನೆಯಾಯಿತು. ಮಂಡಳಿ ಪ್ರಾರಂಭವಾದಾಗ ಜಾಗತೀಕವಾಗಿ ನಮ್ಮ ಉತ್ಪಾದನೆ ಶೇ.6ರಷ್ಟು ಇತ್ತು. ಇಂದು ಶೇ.42ರಷ್ಟು ಆಗಿದ್ದು, ಇದಕ್ಕೆ ರೈತರು ಹಾಗೂ ಕಾರ್ಮಿಕರ ಪರಿಶ್ರಮವೇ ಕಾರಣ. ದೇಶದ 25ಕ್ಕೂ ಹೆಚ್ಚು ರಾಜ್ಯಗಳಲ್ಲಿ ರೇಷ್ಮೆ ಕೆಲಸಗಳು ನಡೆಯುತ್ತಿವೆ. ಇದರಲ್ಲಿ ಕರ್ನಾಟಕ ರಾಜ್ಯ ನಂ.1 ಸ್ಥಾನದಲ್ಲಿ ಮುಂದುವರೆದಿದೆ ಎಂದು ಹೇಳಿದರು.

ಕೇಂದ್ರ ರೇಷ್ಮೆ ಮಂಡಳಿ ದೇಶಾದಾದ್ಯಂತ 159 ಶಾಖೆ ಹಾಗೂ ವಿಸ್ತರಣಾ ಶಾಖೆಗಳನ್ನು ಹೊಂದಿದೆ.





ಇದರಲ್ಲಿ 28 ಕರ್ನಾಟಕ ರಾಜ್ಯದಲ್ಲಿವೆ. ಬಹಳಷ್ಟು ವಿಜ್ಞಾನಿಗಳು ರಾಜ್ಯದವರೇ ಇದ್ದಾರೆ.

ವಿಶ್ವದ ರೇಷ್ಮೆ ಮಾರುಕಟ್ಟೆಯಲ್ಲಿ ಚೀನಾ ಮೊದಲ ಸ್ಥಾನದಲ್ಲಿದೆ. 2030ರ ವೇಳೆಗೆ ಭಾರತವು ಶೇ.50ರಷ್ಟು ಉತ್ಪಾದನೆ ಮಾಡಿ ಚೀನಾವನ್ನು ಹಿಂದಿಕ್ಕಬೇಕು. ಈ ನಿಟ್ಟಿನಲ್ಲಿ ರೈತರು ಎದುರಿಸುವ ಸಮಸ್ಯೆ ಪರಿಹರಿಸಲು ಹಾಗೂ ಆರ್ಥಿಕ ನೆರವು ನೀಡಲು ರೇಷ್ಮೆ ಮಂಡಳಿ ಸದಾ ಸಿದ್ಧವಿದೆ ಎಂದು ಹೇಳಿದರು.

ಸ್ವಯಂ ಚಾಲಿತ ರೇಷ್ಮೆ ನೂಲಿನ ಯಂತ್ರ ಖರೀದಿಗೆ ಕೇಂದ್ರ ಸರ್ಕಾರ ಶೇ.50ರಷ್ಟು ಹಾಗೂ ರಾಜ್ಯ ಸರ್ಕಾರ ಶೇ.25ರಷ್ಟು ಸಹಾಯಧನ ನೀಡುತ್ತಿದೆ. ಉಳಿದ ಹಣವನ್ನು ರೈತರು ಪಾವತಿಸಬೇಕು. ಆದರೆ ಇದರ ಮೇಲಿನ ಜಿ.ಎಸ್.ಟಿಯನ್ನು ಖರೀದಿಸುವ ರೇಷ್ಮೆ ಕೆಲಸಗಾರರು ಭರಿಸಬೇಕು ಎಂದು ಅಳಲು ತೋಡಿಕೊಂಡಿದ್ದು, ಮುಂಬರುವ ದಿನಗಳಲ್ಲಿ ಸ್ವಯಂ ಚಾಲಿನ ನೂಲಿನ ಯಂತ್ರ ಖರೀದಿ ಮೇಲಿನ ಜಿ.ಎಸ್.ಟಿ ತೆಗೆದು ವಿನಾಯಿತಿ ನೀಡಲಾಗುವುದು ಎಂದು ತಿಳಿಸಿದರು.

ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಬಿ.ಎನ್. ಸುಮಿತಾ ಮಾತನಾಡಿ, ಇಂದಿನ ತಾಂತ್ರಿಕತೆಯ ಡಿಜಿಟಲ್ ಯುಗದಲ್ಲಿ ಸಿಗುವ ಆಧುನಿಕ ತಂತ್ರಾಂಶಗಳನ್ನು ಬಳಸಿಕೊಂಡು ಉತ್ತಮವಾದ ಬೆಳೆ ಬೆಳೆಯುವುದರೊಂದಿಗೆ ಆದರ್ಶಯುತ ಕೃಷಿಕರಾಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ರೇಷ್ಮೆ ಕೃಷಿ ಇಲಾಖೆ ಹೆಚ್ಚುವರಿ ನಿರ್ದೇಶಕ ವೈ.ಟಿ.ತಿಮ್ಮಯ್ಯ ಮಾತನಾಡಿ, ರೇಷ್ಮೆ ಕೃಷಿ ಬೆಳೆಯು ಮಳೆ ಬಂದಾಗ ಕೊಡೆ ಹಿಡಿಯುವಂತೆಕಾಲ–ಕಾಲಕ್ಕೆಬದಲಾಗುವ ಬೆಳೆಯಾಗಿ ಮಾರ್ಪಾಡಾಗಿದೆ. ಇದನ್ನು ಅಪ್ಪಿಕೊಂಡಷ್ಟು ಮೇಲೆತ್ತರಕ್ಕೆ ಕೊಂಡೊಯ್ಯುತ್ತದೆ ಎಂದರು.

ರೇಷ್ಮೆ ಕೃಷಿ ಮೇಳದ ಅಂಗವಾಗಿ ರೇಷ್ಮೆ ಕೃಷಿಗೆ ಸಂಬಂಧಿಸಿದ ರೇಷ್ಮೆ ಕೃಷಿ ವಸ್ತುಪ್ರದರ್ಶನ, ತಂತ್ರಜ್ಞಾನಗಳು, ಕಿರುಪುಸ್ತಕಗಳು ಮತ್ತು ಕಿರುಹೊತ್ತಿಗೆಗಳನ್ನು ಬಿಡುಗಡೆ ಮಾಡಲಾಯಿತು. ರೈತರು ಹಾಗೂ ವಿಜ್ಞಾನಿಗಳ ಸಂವಾದವೂ ನಡೆಯಿತು.

ಕಾರ್ಯಕ್ರಮದಲ್ಲಿ ಕೇಂದ್ರ ರೇಷ್ಮೆ ಮಂಡಳಿ ನಿರ್ದೇಶಕ ಗಾಂಧಿದಾಸ್, ವಿಜ್ಞಾನಿಗಳ ವಿಭಾಗದ ಡೀನ್ ಡಾ.ಎಲ್. ಕುಸುಮ, ಡಾ.ಭಾಗ್ಯ, ರೇಷ್ಮೆ ಇಲಾಖೆ ಉಪನಿರ್ದೇಶಕ ಮಾರಪ್ಪ ಬೀರಲದಿನ್ನಿ, ಅಮೃತ ಆರ್ಗ್ಯಾನಿಕ್ ಫರ್ಟಿಲೈಜರ್ ಕೆ.ನಾಗರಾಜ್, ಪ್ರಗತಿಪರ ಕೃಷಿಕ ಡಾ.ವೀರಭದ್ರಪ್ಪ ಸೇರಿದಂತೆ ರೇಷ್ಮೆ ಇಲಾಖೆ ಅಧಿಕಾರಿಗಳು, ರೇಷ್ಮೆ ಕೃಷಿಕರು ಇದ್ದರು.

---

# ಹೋರಾಟಗಾರ ಸುಂದರೇಶ್ ನೆನಪು

» **ಚಿತ್ರದುರ್ಗ**

ರೈತರಿಗೆ ಅನ್ಯಾಯವಾದರೆ ಸಿಡಿದೇಳುತ್ತಿದ್ದ ಎನ್.ಡಿ.ಸುಂದರೇಶ್ ದಿಟ್ಟ ಹೋರಾಟಗಾರ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಉಪಾಧ್ಯಕ್ಷ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಸ್ಮರಿಸಿದರು.

ರೈತ ನಾಯಕ ಎನ್.ಡಿ.ಸುಂದರೇಶ್‌ರವರಿಗೆ ಪ್ರವಾಸಿ ಮಂದಿರದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಸ್ಮರಣೋತ್ಸವದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ನಂಜುಂಡಸ್ವಾಮಿ, ಬಾಬಾಗೌಡ ಪಾಟೀಲ್, ಹೆಚ್.ಎಸ್.ರುದ್ರಪ್ಪನವರ ಸಮಕಾಲೀನರಾಗಿದ್ದ ಎನ್.ಡಿ.ಸುಂದರೇಶ್ ಸರಳ ವ್ಯಕ್ತಿತ್ವದವರು. ರೈತರ ಸಂಘಟನೆಗಾಗಿ ಹಳ್ಳಿ ಹಳ್ಳಿಗೆ ತಿರುಗುತ್ತಿದ್ದರು. ರೈತ ಬೆವರಿನಿಂದ ಕಟ್ಟಿದ ಕರ್ನಾಟಕ ರಾಜ್ಯ ರೈತ ಸಂಘ ಈಗ ಅನೇಕ ಬಣಗಳಾಗಿರುವುದು ನೋವಿನ ಸಂಗತಿ. ಸುಂದರೇಶ್‌ರವರ ಆಸೆಯಂತೆ ಎಲ್ಲರೂ ಒಂದಾಗಬೇಕು ಎಂದು ಮನವಿ ಮಾಡಿದರು.

ರೈತ ಮುಖಂಡ ಆರ್.ಬಿ.ನಿಜಲಿಂಗಪ್ಪ ಮಾತನಾಡಿ ನರಗುಂದ, ನವಲಗುಂದದಲ್ಲಿ ತಹಶೀಲ್ದಾರ್ ಜೀಪಿಗೆ ಅಡ್ಡ ಮಲಗಿದ ರೈತರ ಮೇಲೆ ವಾಹನ ಹರಿದ ಪರಿಣಾಮ ಕೆಲವು ರೈತರು ಮೃತಪಟ್ಟಾಗ ಎನ್.ಡಿ.ಸುಂದರೇಶ್ ಅಲ್ಲಿ ಹೋರಾಟಕ್ಕೆ ಇಳಿದರು. ಪ್ರತಿವರ್ಷವೂ ರೈತ ಹುತಾತ್ಮರದಿನಾಚರಣೆಯನ್ನುಆಚರಿಸಲಾಗುತ್ತಿದೆ. ಅನೇಕ ಸಾರಿ ಸೆರೆಮನೆ ವಾಸ ಅನುಭವಿಸಿದ್ದೇವೆ. ವಿಭಜನೆಯಾಗಿರುವ ರೈತ ಬಣಗಳೆಲ್ಲಾ ಒಂದಾಗಿ



ಎನ್.ಡಿ.ಸುಂದರೇಶ್‌ರವರ ಹೋರಾಟದ ಹಾದಿಯಲ್ಲಿ ಸಾಗಬೇಕಿದೆ ಎಂದು ಹೇಳಿದರು.

ಚಿಕ್ಕಬ್ಬಿಗೆರೆ ನಾಗರಾಜ್ ಮಾತನಾಡುತ್ತ ರೈತರಲ್ಲಿ ಹೋರಾಟದ ಕಿಚ್ಚು ಹಚ್ಚಿದವರು ಎನ್.ಡಿ.ಸುಂದರೇಶ್. ಅವರ ಹಾದಿಯಲ್ಲಿ ರೈತರು ಹೋರಾಟ ಮಾಡಬೇಕಿದೆ. ಪ್ರೊ.ನಂಜುಂಡಸ್ವಾಮಿರವರ ಸಮಕಾಲೀನರಾಗಿದ್ದ ಎನ್.ಡಿ.ಸುಂದರೇಶ್‌ರವರ ಆಸೆಯಂತೆ ಎಲ್ಲಾ ರೈತ ಬಣಗಳು ಒಂದಾಗಬೇಕೆಂದರು.ರೈತ ಮುಖಂಡ ತಿಪ್ಪೇಸ್ವಾಮಿ ಮಾತನಾಡಿ ಪ್ರತಿಯೊಬ್ಬ ರೈತನು ಎನ್.ಡಿ.ಸುಂದರೇಶ್‌ರವರ ಹೋರಾಟದ ಹಾದಿಯಲ್ಲಿ ಸಾಗಬೇಕು. ಶುದ್ದ ಹಸ್ತ, ನೇರ ನಡೆ ನುಡಿಯ ನಿಷ್ಟುರವಾದಿ ಹೋರಾಟಗಾರರಾಗಿದ್ದ ಅವರನ್ನು ರೈತರು ಸ್ಮರಿಸಿಕೊಳ್ಳಬೇಕಿದೆ. ಜಾಗತಿಕ ತಾಪಮಾನದ ಪರಿಣಾಮ ರೈತರು ಜ್ವಲಂತ ಸಮಸ್ಯೆಯನ್ನುಎದುರಿಸುತ್ತಿದ್ದಾರೆ.ಹಾಗಾಗಿರೈತರು ಒಗ್ಗಟ್ಟಿನಿಂದ ಹೋರಾಟಕ್ಕೆ ಇಳಿಯಬೇಕೆಂದು ವಿನಂತಿಸಿದರು.ಮತ್ತೊಬ್ಬ ರೈತ ಮುಖಂಡ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ ಮಾತನಾಡುತ್ತ ರೈತರ ಹೆಗಲಮೇಲಿರುವ ಹಸಿರುಶಾಲು ದೇಶದೆಲ್ಲೆಡೆ ಗುರುತಿಸಿಕೊಂಡಿದೆ ಎಂದರೆ ಅದಕ್ಕೆ ರೈತ ನಾಯಕ ಎನ್.ಡಿ.ಸುಂದರೇಶ್‌ರವರ ಹೋರಾಟವೇ ಕಾರಣ. ಹೋಳಾಗಿರುವ ಎಲ್ಲಾ ರೈತ ಬಣಗಳು ಒಂದಾದರೆ ಅವರ ಆತ್ಮಕ್ಕೆ ಶಾಂತಿ ಸಿಕ್ಕಂತಾಗುತ್ತದೆ ಎಂದರು. ರೈತರುಗಳಾದ ಮಲ್ಲಹಳ್ಳಿ ರವಿಕುಮಾರ್, ನಾಗರಾಜ್ ಮುದ್ದಾಪುರ, ಎಂ.ಬಿ.ಪ್ರಶಾಂತ್‌ರೆಡ್ಡಿ, ಹೊನ್ನೂರು ಶ್ರೀನಿವಾಸ್, ಸಿದ್ದಬಸಣ್ಣ, ಎಂ.ಸಿ.ಚನ್ನಕೇಶವ, ಬಿ.ಸುರೇಶ್, ಅಜ್ಜಣ್ಣಶಿವಣ್ಣ, ಅಂಬರೇಶ್, ಡಿ.ಟಿ.ಮಂಜಣ್ಣ ಹಿರೇಹಳ್ಳಿ, ಹಿರೇಹಳ್ಳಿ ತಿಪ್ಪೇಸ್ವಾಮಿ, ಕೆ.ಎಸ್. ಕೊಟ್ರಬಸಪ್ಪ, ಕೆ.ಎಂ.ಕಾಂತರಾಜು, ಎನ್. ತಿಪ್ಪೇಸ್ವಾಮಿ ಇವರುಗಳು ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

# ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಜಿಲ್ಲಾಧಿಕಾರಿ ಕಚೇರಿ ಎದುರು ಅಲೆಮಾರಿ ಬುಡ್ಗಜಂಗಮರ ಪ್ರತಿಭಟನೆ

» **ಚಿತ್ರದುರ್ಗ**

ಮೂಲಭೂತ ಸೌಲಭ್ಯಗಳಿಗೆ ಒತ್ತಾಯಿಸಿ ಅಲೆಮಾರಿ ಬುಡ್ಗ ಜಂಗಮರು ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿದರು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿ ಸಹಾಯಕರಿಗೆ ಮನವಿ ಸಲ್ಲಿಸಿ ಮೂಲಸೌಲಭ್ಯಗಳನ್ನು ಕಲ್ಪಿಸಬೇಕೆಂದು ಆಗ್ರಹಿಸಿದರು.ನಗರ ಹಾಗೂ ಸುತ್ತಮುತ್ತಲಿನ ಬಯಲು ಪ್ರದೇಶಗಳಲ್ಲಿ ಟೆಂಟ್‌ಗಳನ್ನು ನಿರ್ಮಿಸಿಕೊಂಡು ಮಳೆ, ಚಳಿ–ಗಾಳಿಯನ್ನು ಲೆಕ್ಕಿಸದೆ ಜೀವಿಸುತ್ತಿರುವ ಅಲೆಮಾರಿ ಬುಡ್ಗ ಜಂಗಮರು ಮೂಲಭೂತ ಸೌಲಭ್ಯಗಳಾದ ರಸ್ತೆ, ನೀರು, ದೀಪ, ಚರಂಡಿ ವ್ಯವಸ್ಥೆಯಿಂದ ವಂಚಿತರಾಗಿದ್ದಾರೆ. ದಾವಣಗೆರೆ ರಸ್ತೆಯಲ್ಲಿರುವ




ಕಾಪ್ರಾ ಪೆಟ್ರೋಲ್ ಬಂಕ್ ಸಮೀಪ ಹಲವು ದಶಕಗಳಿಂದ ಬುಡ್ಗ ಜಂಗಮರು ಟೆಂಟ್‌ಗಳಲ್ಲಿ ಜೀವನ ಸಾಗಿಸುತ್ತಿದ್ದು, ಕತ್ತಲೆಯಾಗಿರುವುದರಿಂದ ರಾತ್ರಿ ವೇಳೆಯಲ್ಲಿ ವಿಷ ಜಂತುಗಳಿಂದ ಕಚ್ಚಿಸಿಕೊಂಡಿರುವುದುಂಟು. ಕರಡಿ ಹಾವಳಿಯಿಂದಲೂ ಹೆದರುತ್ತಿದ್ದಾರೆ. ಜಿಲ್ಲಾಡಳಿತ ಇತ್ತ ಗಮನಹರಿಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಧಮ್ಮ ಸಾಂಸ್ಕೃತಿಕ ಕೇಂದ್ರ ಆರ್.ವಿಶ್ವಸಾಗರ್, ಭ್ರಷ್ಟಾಚಾರ ವಿರೋಧಿ ಆಂದೋಲನ ಜಿಲ್ಲಾಧ್ಯಕ್ಷ ಹನುಮಂತಪ್ಪ ದುರ್ಗ ಇವರುಗಳು ಒತ್ತಾಯಿಸಿದರು.ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್, ಜಿಲ್ಲಾ ಅಲೆಮಾರಿ ಬುಡ್ಗ ಜಂಗಮ ಒಕ್ಕೂಟದ ಜಿಲ್ಲಾಧ್ಯಕ್ಷ ವಸಂತಕುಮಾರ್, ಕೆ.ಎನ್.ನಾಗರಾಜ, ವೀರೇಶ್, ವಿ.ಮಾರಪ್ಪ, ವಸಂತ, ಸುಜಾತಮ ಸುಂಕಮ್ಮ, ವಿಜಯಮ್ಮ ಇನ್ನು ಅನೇಕರು ಪ್ರತಿಭಟನೆಯಲ್ಲಿದ್ದರು.

---

# ಅಮಿತ್‌ಷಾ ವಿರುದ್ಧ ಸಾಮಾಜಿಕ ಸಂಘರ್ಷ ಸಮಿತಿ ಪ್ರತಿಭಟನೆ



» **ಚಿತ್ರದುರ್ಗ**

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಹೆಸರು ಜಪಿಸುವ ಬದಲು ದೇವರ ಸ್ಮರಣೆ ಮಾಡಿದರೆ ಸ್ವರ್ಗ ಪ್ರಾಪ್ತಿಯಾಗುತ್ತದೆಂದು ಹೇಳಿರುವ ಕೇಂದ್ರ ಗೃಹ ಸಚಿವ ಅಮಿತ್‌ಷಾ ವಿರುದ್ಧ ಸಾಮಾಜಿಕ ಸಂಘರ್ಷ ಸಮಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು. ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ಅಮಿತ್‌ಷಾ ರಾಜಿನಾಮೆಗೆ ಒತ್ತಾಯಿಸಿದರು. ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಪ್ರೊ.ಸಿ.ಕೆ.ಮಹೇಶ್ ದೇಶದ ಐಕ್ಯತೆಗೆ ಪೆಟ್ಟು ಕೊಡುವಂತ ಮಾತುಗಳನ್ನಾಡಿರುವ ಅಮಿತ್‌ಷಾ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಶೋಷಿತರು, ಮಹಿಳೆಯರನ್ನು ದಿಕ್ಕುತಪ್ಪಿಸಲು ಹೊರಟಂತಿದೆ. ಬ್ರಾಹ್ಮಣ್ಯ ಆಳ್ವಿಕೆ ಆರಂಭದಲ್ಲಿ ನಮ್ಮ ದೇಶ ವಿಭಜನೆಯಾಯಿತು. ಈಗ ಮತ್ತೊಮ್ಮೆ ಅಂತಹ ಆಳ್ವಿಕೆ ಶುರುವಾಗುವ ವಾತಾವರಣವಿದೆ. ಅಖಂಡ ಭಾರತ ಉಳಿಯಬೇಕಾಗಿರುವುದರಿಂದ ಎಲ್ಲರೂ ಒಗ್ಗೂಡಬೇಕಿದೆ ಎಂದರು. ಅಮಿತ್‌ಷಾ ಹೇಳಿಕೆ ದೇವರು, ಧರ್ಮದ ಹೆಸರಿನಲ್ಲಿ ಹೊಸ ಚಿಂತನೆ, ಚಳುವಳಿಗೆ ಬುನಾದಿ ತೋಡಿದಂತೆ ಕಾಣುತ್ತಿದೆ. ಕಾಂಗ್ರೆಸ್ ಅಂಬೇಡ್ಕರ್‌ರವರನ್ನು ಚುನಾವಣೆಯಲ್ಲಿ ಸೋಲಿಸಿತು ಎಂದು ಕೋಮುವಾದಿ ಬಿಜೆಪಿ. ಅಪ ಪ್ರಚಾರದಲ್ಲಿ ತೊಡಗಿರುವುದರ ವಿರುದ್ದ ದಲಿತರು ಜಾಗೃತಿಗೊಳ್ಳಬೇಕಿದೆ. ಬ್ರಾಹ್ಮಣ್ಯ ಸಿದ್ದಾಂತದ ವಿರುದ್ದ ನಮ್ಮ ಹೋರಾಟವಿರಬೇಕೆಂದು ಹೇಳಿದರು. ಸಾಮಾಜಿಕ ಸಂಘರ್ಷ ಸಮಿತಿಯ ಜಿಲ್ಲಾಧ್ಯಕ್ಷ ಕೆ.ಕುಮಾರ್, ಪ್ರಧಾನ ಕಾರ್ಯದರ್ಶಿ ಸಿ.ಎ.ಚಿಕ್ಕಣ್ಣ, ಡಿ.ದುರುಗೇಶ್, ಎಂ.ರಾಮಾಂಜನೇಯ, ಆರ್.ರಾಮಲಿಂಗಪ್ಪ, ಕೆ.ಕೃಷ್ಣಮೂರ್ತಿ ಡಿ.ಯಲ್ಲಪ್ಪ, ಹೊಳೆಯಪ್ಪ, ಹನುಮಂತಪ್ಪ ದುರ್ಗ, ನ್ಯಾಯವಾದಿಗಳಾದ ಡಿ.ವೆಂಕಟೇಶ್, ಎಲ್.ಸುರೇಶ್, ದಲಿತ ಮುಖಂಡ ಬಿ.ರಾಜಣ್ಣ ಇನ್ನು ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



**ಚಳ್ಳಕೆರೆ ನಗರ ನಗರಸಭೆ ಉಪಾಧ್ಯಕ್ಷರಾಗಿ ಆಯ್ಕೆಯಾದ ಸುಮಭರಮಯ್ಯರವರನ್ನು ಪಕ್ಷದ ಮುಖಂಡರು, ಕಾರ್ಯಕರ್ತರು ಅಭಿನಂಧಿಸಿದರು.**

---

**ಪ್ರಮುಖ ಸುದ್ದಿ**

**ನಗರಂಗೆರೆ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ**

# 6ನೇ ಬಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ನಾಮಪತ್ರ

» **ಚಳ್ಳಕೆರೆ**

ತಾಲ್ಲೂಕಿನ ನಗರಂಗೆರೆ ಕೃಷಿ ಪತ್ತಿನ ಸಹಕಾರ ಸಂಘದ 2024–2029 ಸಾಲಿನ ನೂತನ ನಿರ್ದೇಶಕ ಆಯ್ಕೆಯಾಗಿ ಚುನಾವಣೆ ಘೋಷಣೆಯಾಗಿದ್ದು, ನಾಮಪತ್ರ ಸಲ್ಲಿಸಲು ಡಿ.21ರ ಂದು ಕಡೆದಿನವಾಗಿತ್ತು. ಡಿ.22ರಂದು ನಾಮಪತ್ರಗಳ ಪರಿಶೀಲನೆ, 23ರಂದು ವಾಪಾಸಾತಿ, 29ರಂದು ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ, ಶಿಕ್ಷಕರ ಇಲಾಖೆಯ ಎಚ್.ಎನ್.ಶ್ರೀಧರ ತಿಳಿಸಿದರು.

ಚಿತ್ರದುರ್ಗ ಜಿಲ್ಲಾ ಸಹಕಾರಿ ಕ್ಷೇತ್ರದ



ಬ್ಯಾಂಕ್‌ನ ಅಧ್ಯಕ್ಷ ಡಿ.ಸುಧಾಕರ ಪ್ರತಿನಿಧಿಸುವ ಕ್ಷೇತ್ರವಾಗಿದ್ದು, ಆರನೇ ಬಾರಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ನಾಮಪತ್ರ ಸಲ್ಲಿಸಿದ್ದಾರೆ. ರಾಜಕೀಯ ಕ್ಷೇತ್ರದಲ್ಲಿ ಸಹಕಾರಿ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡ ಡಿ.ಸುಧಾಕರ್ ನಗರಂಗೆರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘದಿಂದಲೇ ನಿರಂತರವಾಗಿ ಚುನಾವಣೆಯನ್ನು ಗೆಲ್ಲುತ್ತಾ ಬಂದಿದ್ದಾರೆ.

ನಗರಂಗೆರೆ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಒಟ್ಟು ಸಾಲಗಾರರ ಕ್ಷೇತ್ರದಿಂದ 12 ನಿರ್ದೇಶಕರು ಆಯ್ಕೆಯಾಗಬೇಕಿದ್ದು ಈಗಾಗಲೇ 48 ಜನ ನಾಮಪತ್ರ ಸಲ್ಲಿಸಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು 516 ಜನ ಮತದಾನ ಮಾಡುವ ಹಕ್ಕು ಪಡೆದಿದ್ದಾರೆ. ಸಾಲಗಾರರಲ್ಲದ ಕ್ಷೇತ್ರದಿಂದ ಕೇವಲ ಒಬ್ಬ ನಿರ್ದೇಶಕರು ಆಯ್ಕೆಯಾಗಬೇಕಿದ್ದು 173 ಮತದಾರರು ಇದ್ದಾರೆ. ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಸಿ.ಓಬಯ್ಯ, ತಿಪ್ಪೇರುದ್ರಪ್ಪ, ರಾಜಶೇಖರಪ್ಪ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಕುಮಾರಸ್ವಾಮಿ, ಸದಸ್ಯರಾದ ಹಿದಾಯಿತ್‌ವುಲ್ಲಾ ಮುಂತಾದವರು ಇದ್ದರು.





# ಸ್ವಾವಲಂಬಿ ಜೀವನವೇ ನನಗೆ ಖುಷಿ ಎಂದ ಮಂಜುಳ

ಬದಲಾದ ಸಾಮಾಜಿಕ ಸನ್ನಿವೇಶದಲ್ಲಿ ಮಹಿಳೆಯರು ಸಕ್ರಿಯವಾಗಿ ಕ್ಷೇತ್ರಗಳಲ್ಲಿ ತೊಡಗಿಸಿಕೊಳ್ಳುತ್ತಿದ್ದು. ಪುರುಷರಿಗೆ ಸಮಾನವಾಗಿ ದುಡಿದು ತಮ್ಮ ವೈಯಕ್ತಿಕ ಸಾಧನೆಯ ಮೈಲಿಗಲ್ಲುಗಳನ್ನು ನೆಡುತ್ತಾ ಬರುತ್ತಿದ್ದಾರೆ. ಅಭ್ಯದಯಕ್ಕೆ ಮೂಲ ಕಾರಣವಾಗಿರುವ ಮೂಲ ಕಾರಣವಾಗಿರುವ ಉದ್ಯಮಕ್ಕೆ ಕ್ಷೇತ್ರಕ್ಕೆ ಮಹಿಳೆಯರು ಸಾಕಷ್ಟು ಕೊಡುಗೆಯನ್ನು ನೀಡುತ್ತಿದ್ದಾರೆ. ಪೈಪೋಟಿಗಿಳಿದರೆ ನಮಗಾರೂ ಸಾಟಿ ಇಲ್ಲ ಎಂಬಂತೆ ಎಲ್ಲಾ ಕ್ಷೇತ್ರದಲ್ಲಿ ಮಹಿಳೆಯರು ದಾಪುಗಾಲು ಹಾಕುತ್ತಿದ್ದಾರೆ.

ಕೋಟೆ ನಾಡು ಚಿತ್ರದುರ್ಗ ನಗರದಲ್ಲಿ ಅತ್ಯುತ್ತಮ ಗ್ರಾಹಕಸ್ನೇಹಿ ಸೇವೆಯನ್ನು ನೀಡುತ್ತಾ ತನ್ನದೇ ಆದ ಛಾಪು ಮೂಡಿಸಿರುವ ಶ್ರೀ ಅಹೋಬಲ ಸ್ಟೀಲ್ ಅಂಡ್ ಸಿಮೆಂಟ್ ವಹಿವಾಟಿನ ನಿರ್ವಹಣೆಯ ದೊಡ್ಡ ಜವಾಬ್ದಾರಿಯನ್ನುಹೊತ್ತುಮುನ್ನಡೆಸುತ್ತಿದ್ದಾರೆ. ಕಳೆದ ಏಳೆಂಟು ವರ್ಷಗಳಿಂದ ವ್ಯವಹಾರದ ನಿರ್ವಹಣೆಯಲ್ಲಿ ತೊಡಗಿಸಿಕೊಂಡಿರುವ ಮಂಜುಳಾ ಅವರು ಅನೇಕ ಅಡೆತಡೆಗಳನ್ನು ಎದುರಿಸಿ, ಯಶಸ್ವಿಯಾಗಿ ಸಾಧಿಸಿ

ಕೊಳ್ಳಬೇಕು" ಎನ್ನುವ ಕಿವಿಮಾತು ಹೇಳುತ್ತಿದ್ದರು. ಮಂಜುಳ ಅವರು ತಂದೆಯ ಮಾತನ್ನೇ ದೊಡ್ಡ ಸ್ಫೂರ್ತಿಯಾಗಿ ಸ್ವೀಕರಿಸಿದ್ದರು.

ಬಿಕಾಂ ಪದವಿ ಪಡೆದರೂ ಮದುವೆಯ ನಂತರ ಮಕ್ಕಳ ಲಾಲನೆ, ಪಾಲನೆಯಲ್ಲಿ ತೊಡಗಿಸಿಕೊಂಡಿದ್ದ ಮಂಜುಳ ಅವರನ್ನು ಕುಟುಂಬದ ಸದಸ್ಯರೇ ಪ್ರೇರೇಪಿಸಿ, ನೀವು ಉದ್ಯಮ, ವಹಿವಾಟಿನಲ್ಲಿ ತೊಡಗಿಸಿ ಕೊಳ್ಳಬೇಕು ಎನ್ನುವ ಸುವ ಸಲಹೆ ನೀಡಿ. ಒತ್ತಾಸೆಯಾಗಿ ನಿಂತರು. ಇದರಿಂದ ನಾನು ಅಳುಕು ಮನಸ್ಸಿನಿಂದಲೇ ಸ್ಟೀಲ್ ಅಂಡ್ ಸಿಮೆಂಟ್ ವಹಿವಾಟು ನಿರ್ವಹಣೆಯ ಜವಾಬ್ದಾರಿ ತೆಗೆದುಕೊಂಡರು.

ತೋರಿಸಿದ್ದಾರೆ. ಮಂಜುಳ ಅವರು ತಂದೆ ಪಾಲಯ್ಯ ಅವರ ಮುದ್ದಿನ ಮಗಳಾಗಿದ್ದರು.

## ಸಾಮಾಜಿ, ಆರ್ಥಿಕ ಶಿಕ್ಷಣ ಕೊಡುವ ಸ್ವಯಂ ದುಡಿಮೆ

ನನಗೆ ತಿಳಿದಂತೆ ತುಂಬಾ ಜನ ಹೆಣ್ಣು ಮಕ್ಕಳು ಸಣ್ಣ ಸಣ್ಣ ವ್ಯಾಪಾರ, ವಹಿವಾಟಿನಲ್ಲಿ ತೊಡಗಿಸಿಕೊಂಡು ಇಂದು ಅವರ ಕುಟುಂಬಗಳಿಗೆ ಆಧಾರವಾಗಿದ್ದಾರೆ. ಈ ಬಗೆಯ ಹೆಣ್ಣು ಮಕ್ಕಳು ಕಡಿಮೆ ಶಿಕ್ಷಣ ಪಡೆದಿದ್ದರೂ ಕುಟುಂಬಗಳ ಆರ್ಥಿಕ ಆಗುಹೋಗುಗಳನ್ನು ಜಾಣೆಯಿಂದ ನಿರ್ವಹಿಸಿ, ಮಕ್ಕಳಿಗೆ ದುಡಿಮೆಯ ಬೆಲೆ ಎಂದರೇನೆಂಬುದನ್ನು ಮನವರಿಕೆ ಮಾಡುತ್ತಾರೆ. ಮಹಿಳೆಯರು ಮೂಲತಃ ಉಳಿತಾಯಮನಸ್ಥಿತಿಯಧೋರಣೆಯವರಾಗಿರುತ್ತಾರೆ. ಜತೆಗೆ ಅವರು ದುಡಿಮೆಯಲ್ಲೂ ತೊಡಗಿಸಿಕೊಂಡಾಗ ಇದು ಮತ್ತಷ್ಟು ವಿಸ್ತಾರಗೊಂಡು ಇಡೀ ಕುಟುಂಬದ ಚಿತ್ರಣವೇ ಬದಲಾಗುತ್ತದೆ. ಇಂದಿನ ದಿನಮಾನಗಳಲ್ಲಿ ಬಹುತೇಕ ಹೆಣ್ಣು ಮಕ್ಕಳು ಉತ್ತಮ ಶಿಕ್ಷಣ ಪಡೆಯುತ್ತಿದ್ದಾರೆ. ಸೇವಾ ಕ್ಷೇತ್ರದಲ್ಲಿ ವಿಪುಲವಾದ ಉದ್ಯೋಗಾವಕಾಶಗಳು ಇವೆ. ಅದಕ್ಕೆ ಬೇಕಾದ ಕೌಶಲ್ಯಗಳನ್ನು ಕಲಿತು ಸ್ವಾವಲಂಬನೆಯ ದುಡಿಮೆಯ ಹಾದಿಯಲ್ಲಿ ಸಾಗುವ ಪ್ರಯತ್ನ ಮಾಡಬೇಕು. ಎಷ್ಟೇ ಚಿಕ್ಕದಾಗಿರಲಿ ಸ್ವಯಂ ದುಡಿಮೆಯ ಮಾರ್ಗ ಎಂಬುದು ಕೇವಲ ದುಡಿಮೆ ಮಾತ್ರ ತಂದು ಕೊಡುವುದಿಲ್ಲ. ಅದು ಉತ್ತಮ ಸಾಮಾಜಿಕ ಶಿಕ್ಷಣವನ್ನೂ ಕೊಡುತ್ತದೆ. ಈ ಅವಕಾಶವನ್ನು ನಾವು ಕಳೆದುಕೊಳ್ಳಬಾರದು ಎನ್ನುತ್ತಾರೆ ಮಂಜುಳ,



ಪಿಯುಸಿ ವಿದ್ಯಾಭ್ಯಾಸ ಮಾಡುವ ಸಂದರ್ಭದಲ್ಲೇ 'ಮಗಳೇ ನೀನು ಸ್ವಯಂ ಉದ್ಯೋಗದ ಕಡೆ ಗಮನ ಹರಿಸಬೇಕು. ನೀನು ಸ್ವತಂತ್ರವಾಗಿ ಬದುಕು ನಡೆಸುವಂತೆ ಆಗಬೇಕು. ಯಾವುದಾದರೂ ಪರವಾಗಿಲ್ಲ ಒಂದು ಉದ್ಯೋಗ ಪಡೆದುಕೊಂಡು ನಿನ್ನ ಸ್ವಯಂ ಆದಾಯವನ್ನು ಕಂಡು

ಆರಂಭದಲ್ಲಿ ನನಗೆ ಕಷ್ಟವಾಯಿತು. ಆದರೆ, ನನ್ನ ಮಗ ಅರುಣ್ ಬ್ಯುಸಿನೆಸ್ ಐಡಿಯಾಗಳನ್ನು ಹೇಳಿಕೊಟ್ಟರು. ಆರಂಭದಲ್ಲಿ ಆರು ತಿಂಗಳು, ನಂತರ ಒಂದು ವರ್ಷದ ತನಕ ಹೊರಗಿನ ಜನರ ಜತೆ ಹೊಂದಿಕೊಳ್ಳುವುದು ಕಷ್ಟವಾಯಿತು. ಎಲ್ಲ ಹಂತದ ಗ್ರಾಹಕರ ಜತೆ ಕಮ್ಯೂನಿಕೇಶನ್ ಮಾಡುವ ಅವಕಾಶ ಸಿಕ್ಕಿದ್ದರಿಂದ ಬಹಳಷ್ಟು ಕಲಿಯಲು ಅನುಕೂಲ ಆಯಿತು. ನಮ್ಮ ಫರ್ಮ್‌ಗೆ ಬಂದ ಗ್ರಾಹಕರಿಗೆ ನಮ್ಮಲ್ಲಿರುವ. ಉತ್ಪನ್ನಗಳ ಮಾಹಿತಿ, ತಿಳುವಳಿಕೆ ನೀಡಿ ಸೇಲ್ ಮಾಡುತ್ತೇನೆ. ಇದೆಲ್ಲ ಹೊಸ ಬಗೆಯ ತಿಳುವಳಿಕೆ ಆಗಿರುವುದರಿಂದ ಖುಷಿ ಅನಿಸುತ್ತದೆ ಎನ್ನುತ್ತಾರೆ ಮಂಜುಳ,

ಹೆಣ್ಣು ಮಕ್ಕಳು ಹೊರಗಿನ ಪ್ರಪಂಚದಲ್ಲಿ ಸಕ್ರಿಯವಾಗಿದ್ದು. ಏನನ್ನಾದರೂ ಸಾಧಿಸಬೇಕು ಅನ್ನೋದಾದರೆ ಅದಕ್ಕೆ ಕುಟುಂಬದ ಬೆಂಬಲ, ಪ್ರೋತ್ಸಾಹ ಬೇಕು. ಇದು ಕೆಲಸ ನಿರ್ವಹಿಸುವ ಪ್ರದೇಶ, ವ್ಯಾಪ್ತಿಯ ಸವಾಲುಗಳನ್ನು ಎದುರಿಸಲು ತುಂಬಾ ಸಹಾಯಕ ವಾಗುತ್ತದೆ. ಅದರಲ್ಲೂ ವ್ಯಾವಹಾರಿಕ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುವ ಮಹಿಳೆಯರಿಗೆ ಇಂತಹ ಊರುಗೋಲು ಬೇಕು.

ಆರಂಭಿಕ ದಿನಗಳಲ್ಲಿ ಒಬ್ಬಳೇ ಪ್ರಯಾಣ ಮಾಡಲು ಯೋಚಿಸುತ್ತಿದ್ದೆ. ಎಷ ಎಷ್ಟೋ ವರ್ಷಗಳ ಯಾರಾದರೂ ಜತೆಯಲ್ಲಿದ್ದರೆ ಮಾತ್ರ ಪಯಾಣ ಎನ್ನುವ ಸ್ಥಿತಿ ಇತ್ತು. ಬದಲಾಗಿದ್ದೇನೆ.ಸ್ವಂತನಿರ್ಧಾರಕೈಗೊಳ್ಳುವಷ್ಟು ಪ್ರಬುದ್ಧತೆ ಬಂದಿದೆ. ಈ ಬದಲಾವಣೆಯಲ್ಲಿ ನನ್ನ ಮೂವರು ಮೂವರು ಮಕ್ಕಳ ಪಾತ್ರ ಮಹತ್ವದ್ದಾಗಿದೆ.ಜತೆಗೆ ಸ್ಟೀಲ್ಡ್ ಅಂಡ್ ಸಿಮೆಂಟ್‌ನಲ್ಲಿರುವ.

ಸಿಬ್ಬಂದಿನನ್ನಕುಟುಂಬದಷ್ಟೇಒತ್ತಾಸೆಯಾಗಿ ನನಗೆ ಬೆಂಬಲವಾಗಿ ನಿಂತಿದ್ದಾರೆ ಎಂದು ಸ್ಮರಿಸುತ್ತಾರೆ. ಈಗಲೂ ನಾನೇನಾದರೂ ಸವಾಲಿನ ಸನ್ನಿವೇಶ ಎದುರಿಸುವ ಸಂದರ್ಭ ಬಂದಾಗಲೆಲ್ಲ ಧೈರ್ಯ ತುಂಬುತ್ತಾರೆ. ಸಲಹೆ, ಸೂಚನೆ ಕೊಡುತ್ತಾರೆ. ಅದು ನನಗೆ ಹೊಸ ಸ್ಫೂರ್ತಿ ನೀಡುತ್ತಿದೆ. ಮತ್ತಷ್ಟು ಜವಾಬ್ದಾರಿ ತೆಗೆದುಕೊಳ್ಳಲು ಪ್ರೇರಣೆಯಾಗಿದೆ ಎನ್ನುತ್ತಾರೆ. ಸ್ವಂತ ದುಡಿಮೆಯ ಖುಷಿ: ನಮ್ಮ ದುಡಿಮೆಯಲ್ಲಿ ಏನಾದರೂ ಖರೀದುಸುವುದು ಇದೆಯಲ್ಲ. ಅದರ ಸಂತೋಷವೇ ಬೇರೆ. ಗಂಡ, ಮಕ್ಕಳ ದುಡಿಮೆ ಬೇರೆ. ನಮ್ಮ ಸ್ವಂತ ದುಡಿಮೆಯಲ್ಲೇ ನೆಮ್ಮ ಅಗತ್ಯಗಳನ್ನು ಪೂರೈಸಿಕೊಳ್ಳುವುದು ವಿಶೇಷವಾಗಿ ಹೆಣ್ಣು ಮಕ್ಕಳಿಗೆ ವಿಶಿಷ್ಟವಾದ ಆತ್ಮವಿಶ್ವಾಸ, ಭರವಸೆ ನೀಡುತ್ತದೆ. ಹೆಣ್ಣು ಮಕ್ಕಳು ಹೊರಗೆ ಬಂದು ದುಡಿಯಬೇಕು. ಬರೀ ಕೆಲಸ. ಉದ್ಯೋಗ ಮನಸ್ಥಿತಿಗಿಂತ ಸ್ವಂತವಾಗಿ ನೆಲೆ ಎಷ್ಟೋ ಜನರಿಗೆ ಹಣಕಾಸಿನ ಅನುಕೂಲ, ಶೈಕ್ಷಣಿಕ ಅರ್ಹತೆ ಇದ್ದರೂ ಹೊರಗೆ ಬರುವುದಿಲ್ಲ. ಹಾಗಾಗಿ, ಧೈರ್ಯವಾಗಿ ಮುಂದೆ ಬಂದು ತೊಡಗಿಕೊಳ್ಳುವ ಪ್ರಯತ್ನ ಮಾಡಬೇಕು.

# ಕ್ರೈಂ ಸ್ಪೇಷಲಿಸ್ಟ್ ಬಿಟಿವಿ ರಾಜುಗೆ ಸಮಾಜದ ಸಾಧಕ ಪ್ರಶಸ್ತಿ

» **ನಮ್ಮಜನ**

ಚಿತ್ರದುರ್ಗ: ಸುದ್ದಿ ಎಂದರೆ ನಾವೇ ಫಸ್ಟ್ ಎಂಬ ಮಾತು ಚಿತ್ರದುರ್ಗ ಬಿಟಿವಿ ಕನ್ನಡ ಸುದ್ದಿ ವಾಹಿನಿ ಜಿಲ್ಲಾ ವರದಿಗಾರ ಸಿ.ರಾಜಶೇಖರ್ ಅವರಿಗೆ ಪಕ್ಕ ಒಪ್ಪುತ್ತದೆ.

ಕೆಲಸ ಮೊದಲು ಉಳಿದಿದ್ದು ನೆಕ್ಸ್ಟ್ ಎಂಬ ತತ್ವದಡಿ ಕೆಲಸ ನಿರ್ವಹಿಸುವ ರಾಜು ಅವರು ತಮ್ಮ ಕಾಯಕ ನಿಷ್ಠೆ ಸಮಾಜದಲ್ಲಿ ಜನರ ಮೆಚ್ಚುಗೆಗೆ ಸಹ ಪಾತ್ರವಾಗಿದ್ದಾರೆ.

ಗ್ರಾಮೀಣ ಭಾಗದಿಂದ ಉದ್ಯೋಗ ಹರಸಿ ಜಿಲ್ಲಾ ಕೇಂದ್ರಕ್ಕೆ ಬಂದು ಪತ್ರಿಕೋದ್ಯಮ ಕ್ಷೇತ್ರದಲ್ಲಿ ಕಳೆದ 9 ವರ್ಷಗಳಿಂದ ಪ್ರಜಾಪ್ರಗತಿ, ವಿಶ್ವವಾಣಿ ಪತ್ರಿಕೆಯ ವರದಿಗಾರಾಗಿ ಸೇವೆ ಸಲ್ಲಿಸಿ, ಬಳಿಕ 5 ವರ್ಷಗಳ ಕಾಲ ಚಿತ್ರದುರ್ಗದಲ್ಲಿ ರಾಜ್ ನ್ಯೂಸ್ ಕನ್ನಡ ವಾಹಿನಿಯಲ್ಲಿ ಜಿಲ್ಲಾ ವರದಿಗಾರಾಗಿ ಹಾಗೂ ನಾಲ್ಕು ವರ್ಷಗಳಿಂದ ಬಿಟಿವಿ ಜಿಲ್ಲಾ ವರದಿಗಾರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ಬೇಡರೆಡ್ಡಿಹಳ್ಳಿ ಗ್ರಾಮದಲ್ಲಿ 1991 ಡಿ.2 ರಂದು ಜನಿಸಿದವರು. ತಂದನಂತರ ಚಂದ್ರಣ್ಣ ತಾಯಿ ಕೆಂಚಮ್ಮ ಅವರ ಪುತ್ರರಾಗಿ ಜನರಿಸಿದವರು. ಪ್ರಾಥಮಿಕ ಶಿಕ್ಷಣ ಬೇಡರೆಡ್ಡಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಗಿಸಿ, ಪ್ರೌಢ ಶಿಕ್ಷಣವನ್ನು ಗ್ರಾಮದ ಜಿ.ವಿ. ಅಂಜಿನಪ್ಪ ಪ್ರೌಢಶಾಲೆಯಲ್ಲಿ ಮುಗಿಸಿವದರು. ಕಾಲೇಜು ಶಿಕ್ಷಣ ಚಿತ್ರದುರ್ಗ ಬಾಲಕರ ಪದವಿ ಪೂರ್ವ ಕಾಲೇಜ್, ಪದವಿ ಚಳ್ಳಕೆರೆ ಹೆಚ್ ಪಿಪಿಸಿ ಕಾಲೇಜ್, ಬಿಇಡಿ ಜಯ್ಯಣ್ಣ ಕಾಲೇಜ್ ನಲ್ಲಿ ಮುಗಿಸಿದವರು.

ನಂತರ ಸ್ನಾತಕೋತ್ತರ ಇತಿಹಾಸ ಪದವಿ ಚಿತ್ರದುರ್ಗ ಕಲಾ ಕಾಲೇಜ್ ಕ್ಯಾಂಪಸ್ ಹಾಗೂ ಪತ್ರಿಕೋದ್ಯಮ ಪದವಿ ಹಂಪಿ ವಿಶ್ವವಿದ್ಯಾನಿಲಯದಲ್ಲಿ ಪಡೆದವರು.



## ಮಾಧ್ಯಮ ಕ್ಷೇತ್ರದ ಸಾಧನೆಗಳ ಶಿಖರ

ಚಿತ್ರದುರ್ಗ ಜಿಲ್ಲೆಯಲ್ಲಿ ಕೇವಲ 33 ನೇ ವಯಸ್ಸಿಗೆ ಯುವ ವರದಿಗಾರಾಗಿ ಎಲ್ಲರ ಗಮನ ಸೆಳೆದಿದ್ದಾರೆ. ಮುಖ್ಯವಾಗಿ ಒಂಟಿ ಮನೆಯಲ್ಲಿ ಐದು ಹೆಣ ಪತ್ತೆ ಪ್ರಕರಣ, ಮೊಳಕಾಲ್ಮೂರು ಶೂಟ್ ಔಟ್ ಪ್ರಕರಣ, ರಾಂಪುರ ಠಾಣಾ ವ್ಯಾಪ್ತಿಯ ಕೋಟಿ ಕೋಟಿ ಗಾಂಜಾ ಪ್ರಕರಣ, ಅಕ್ರಮ ಮರಳು ಗಣಿಗಾರಿಕೆ, ಅಕ್ರಮ ಇಸ್ಪೀಟ್ ಜೂಜಾಟ ಹೀಗೆ ಕ್ರೈಂ ಸುದ್ದಿಗಳ ಮೂಲಕ ರಾಜ್ಯದ ಗಮನ ಸೆಳೆಯುವ ಸುದ್ದಿಗಳನ್ನ ನೀಡಿದವರು.ನಂತರ ಮುರುಘಾ ಶ್ರೀ ಪ್ರಕರಣ, ರೇಣುಕಾಸ್ವಾಮಿ ಕೊಲೆ ಕೇಸ್ ನಲ್ಲಿ ಸಿಸಿಟಿವಿ ಪತ್ತೆ, ಕವಾಡಿಗರಹಟ್ಟಿ ಘಟನೆ ಸೇರಿದಂತೆ ವಿವಿಧ ಘಟನಾವಳಿಗಳಲ್ಲಿ ಕೂಡಾ ರಾಜ್ಯದ ಗಮನ ಸೆಳೆಯುವಂತೆ ಭಿತ್ತರಿಸಿದವರು. ಜಿಲ್ಲೆಯಲ್ಲಿ ಕ್ರೈಂ ಸುದ್ದಿಗಳ ಮೂಲಕ ಎಲ್ಲರ ಗಮನ ಸೆಳೆದಿರುವ ರಾಜಶೇಖರ್ ಅವರ ಸೇವೆ ಸಾಧನೆ ಗುರುತಿಸಿ ಇಂದು ಚಿತ್ರದುರ್ಗದ ತರಾಸು ರಂಗಮಂದಿರದಲ್ಲಿ ಜಿಲ್ಲಾ ವಾಲ್ಮೀಕಿ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ರಾಜಶೇಖರ್ ಅವರಿಗೆ ಉತ್ತಮ ಸಾಧಕರ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ.

## ಕಿಲಾರಿ ಜೋಗಯ್ಯಗೆ ಪ್ರಶಸ್ತಿ

2024 ನೇ ಸಾಲಿಗೆ ಶ್ರೀ ಮಹರ್ಷಿ ವಾಲ್ಮೀಕಿ ಅವರ ಸ್ಮರಣಾರ್ಥ ಪರಿಶಿಷ್ಟ ವರ್ಗ ಇಲಾಖೆಯಿಂದ ಬೆಂಗಳೂರು



ವಿಭಾಗದಿಂದ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲೂಕು ಗಡ್ಡದಾರಹಟ್ಟಿಯಕಿಲಾರಿ ಜೋಗಯ್ಯ ಬಿನ್ ಕಿಲಾರಿ ಬೋರಯ್ಯ ಅವರನ್ನು ಆಯ್ಕೆ ಮಾಡಲಾಗಿದೆ. ಕಿಲಾರಿ ಜೋಗಯ್ಯ ಜಾನುವಾರುಗಳ ಸಂರಕ್ಷಣೆ ವೃತ್ತಿಯ ಮೂಲಕ ಸಮಾಜದ ಒಳಿತಿಗಾಗಿ ಸಲ್ಲಿಸಿದ್ದಾರೆ. ದೇವರ ಎತ್ತುಗಳ ರಕ್ಷಣೆ, ಜಾನುವಾರುಗಳ ಪೋಷಣೆ, ಸ್ಥಳೀಯ ಬುಡಕಟ್ಟು ಸಮುದಾಯದ ಸಂಸ್ಕೃತಿಯ ಸಂರಕ್ಷಣೆ, ಜಾನುವಾರುಗಳ ಮಹತ್ವ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ, ಬುಡಕಟ್ಟು ಸಂಸ್ಕೃತಿಯ ಆಚರಣೆಯ ಮೂಲಕ ಜಾನುವಾರುಗಳ ಸಂತತಿಯ ಸಂರಕ್ಷಣೆ ಮಾಡುತ್ತಿದ್ದಾರೆ. ಇವರ ಅನುಪಮ ಸಮಾಜ ಸೇವೆಯನ್ನು ಗುರುತಿಸಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

## ಡಿ.23ರಂದು "ಶಾಲೆಯಲ್ಲಿದೆ ಶಿಕ್ಷಣ ಜೊತೆಗೆ ರಕ್ಷಣೆ" ತರಬೇತಿ ಕಾರ್ಯಕ್ರಮ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಪೊಲೀಸ್ ಇಲಾಖೆಹಾಗೂಜಿಲ್ಲಾಮಕ್ಕಳರಕ್ಷಣಾಘಟಕವತಿಯಿಂದಇದೇಡಿ.23ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ "ಶಾಲೆಯಲ್ಲಿದೆ ಶಿಕ್ಷಣ ಜೊತೆಗೆ ರಕ್ಷಣೆ" ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ–2009ರ ಅನ್ವಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವ ಅಂದೋಲನಾ ಕುರಿತು ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಉದ್ಘಾಟಿಸುವರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಆರ್.ಮಂಜುನಾಥ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಪೊಲೀಸ್ ಉಪಾಧೀಕ್ಷಕ ಪಿ.ಕೆ.ದಿನಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕಿ ಸುಚೇತಾ ಎಂ ನೆಲವಿಗಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ಭಾಗವಹಿಸುವರು. ಶಾಲೆಯಲ್ಲಿನ ಮಕ್ಕಳ ಸುರಕ್ಷತೆ ಮತ್ತು ತೆರೆದ ಮನೆ ವಿಷಯ ಕುರಿತು ಪೊಲೀಸ್ ಉಪಾಧಿಕ್ಷಕ ಪಿಕೆ.ದಿನಕರ್ ಹಾಗೂ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕುರಿತು ಮಾಯಕೊಂಡ ಕರ್ನಾಟಕ ಪಬ್ಲಿಕ್ ಶಾಲೆ ಇಂಗ್ಲೀಷ್ ಶಿಕ್ಷಕ ಏಕನಾಥ್ ಉಪನ್ಯಾಸ ನೀಡಲಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ಚಿತ್ರದುರ್ಗ:** ಸರ್ವೋಚ್ಚ ನ್ಯಾಯಾಲಯದ ಸೂಚನೆಯಂತೆ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಕೈಗೊಂಡು ನಮಸ್ತೆ ಪೋರ್ಟಲ್‌ನ ಎಂಎಸ್ ಸರ್ವೆ ಆಪ್‌ನಲ್ಲಿ ಅಪ್ಲೋಡ್ ಮಾಡಬೇಕಾಗಿದೆ. ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಹಾಗೂ ನಗರ ಪ್ರದೇಶದ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಯ ಆಯುಕ್ತರು, ಪೌರಾಯುಕ್ತರು, ಮುಖ್ಯಾಧಿಕಾರಿಗಳು ಸರ್ವೇ ಕಾರ್ಯಕೈಗೊಳ್ಳಲಾಗಿದ್ದು, ಜಿಲ್ಲೆಯಲ್ಲಿ ಯಾವುದೇ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಇರುವುದಿಲ್ಲ ಎಂದು ಜಿಲ್ಲಾಮಟ್ಟದ ಸಮೀಕ್ಷೆ ಸಮಿತಿ ಸಭೆಗೆ ಮಂಡಿಸಲಾಗಿರುತ್ತದೆ. ಅದರಂತೆ ಜಿಲ್ಲೆಯ ಗ್ರಾಮೀಣ ಮತ್ತು ನಗರದ ಪ್ರದೇಶಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಇರುವಿದಲ್ಲ ಎಂದು ಸರ್ಕಾರಕ್ಕೆ ವರದಿ ಸಲ್ಲಿಸಬೇಕಾಗಿರುತ್ತದೆ. ಈ ಕುರಿತು ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಇದೇ ಡಿ.26ರೊಳಗೆ ಆಕ್ಷೇಪಣೆ ಸಲ್ಲಿಸಬಹುದು.

# ವಿದ್ಯುತ್, ನೀರಿನಿಂದ ರೈತರ ಬದುಕು ಹಸನಾಗುತ್ತದೆ: ಶಾಸಕ ಗೋವಿಂದಪ್ಪ



» **ಹೊಸದುರ್ಗ**

ತಾಲ್ಲೂಕಿನ ರೈತರಿಗೆ ಸಮರ್ಪಕ ವಿದ್ಯುತ್ ಹಾಗೂ ನೀರು ನೀಡುವ ಗುರಿಯಿತ್ತು. ಆ ಗುರಿ ತಲುಪುವ ಹಂತದಲ್ಲಿದ್ದೇವೆ. ರೈತರಿಗೆ ವಿದ್ಯುತ್ ಹಾಗೂ ನೀರಿನ ಸೌಲಭ್ಯ ಕಲ್ಪಿಸಿದರೆ, ಅವರ ಬದುಕು ಸಮೃದ್ಧವಾಗಿರುತ್ತದೆ. ದೇಶದ ಜಿಡಿಪಿಯೂ ಸಹ ಹೆಚ್ಚಾಗುತ್ತದೆ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ತಾಲ್ಲೂಕಿನ ಮಾರಬಘಟ್ಟ ಗ್ರಾಮದ ಗೇಟ್ ಬಳಿ ಶುಕ್ರವಾರ ಸೋಲಾರ್ ವಿದ್ಯುತ್ ಪ್ಲಾಂಟ್ ಉದ್ಘಾಟಿಸಿ ಮಾತನಾಡಿದರು.

ಸರ್ಕಾರದ ಜಂಟಿ ಯೋಜನೆಯಲ್ಲಿ ಸೋಲಾರ್ ವಿದ್ಯುತ್ ಪ್ಲಾಂಟ್ ನ್ನು ತಾಲ್ಲೂಕಿನ ಮಾರಬಘಟ್ಟ ಸರ್ಕಾರಿ ಗೋಮಾಳದಲ್ಲಿ ಆರಂಭಿಸಲಾಗಿದೆ. ರಾತ್ರಿ ಜಮೀನುಗಳಿಗೆ ನೀರು ಬಿಡಲು ರೈತರು ಹರಸಾಹಸ ಪಡಬೇಕಾಗಿತ್ತು. ಎಷ್ಟೋ ಜನರು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ. ರೈತರ ಹಿತದೃಷ್ಟಿಯಿಂದ ಈ ಯೋಜನೆ ಬಂದಿದೆ. ಈ ಸೋಲಾರ್ ಪ್ಲಾಂಟ್ ನಿಂದಾಗಿ ರೈತರು ಹಗಲಿನಲ್ಲಿಯೂ ಸಹ ನೀರು ಬಿಡಬಹುದು. ತಾಲ್ಲೂಕಿನಲ್ಲಿ ವಿದ್ಯುತ್ ಅವಶ್ಯಕತೆ ಬಹಳ ಇದೆ ಎಂದರು.

'ಭದ್ರಾ ಮೇಲ್ದಂಡೆ ಯೋಜನೆ ಮೂಲಕ ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೂ ಶುದ್ಧ ಕುಡಿಯುವ ನೀರು ತಲುಪಿಸಲಾಗುತ್ತದೆ. ಈ ಕಾರ್ಯಕ್ಕಾಗಿ ಟ್ಯಾಂಕ್ ಗಳ ನಿರ್ಮಾಣ, 126 ಪಂಪ್ ಹೌಸ್ ಗಳ ನಿರ್ಮಾಣ ಆಗುತ್ತಿದ್ದು, ವಿದ್ಯುತ್ ಅವಶ್ಯಕತೆ ಬಹಳ ಇದೆ. ಹಾಗಾಗಿ ಪಂಪ್ ಹೌಸ್ ಗಳಿಗೆ ವಿದ್ಯುತ್ ಪೂರೈಕೆ ಮಾಡುವ ಕೆಲಸ ತುರ್ತಾಗಿ ಆಗಬೇಕು ಎಂದರು.

## ವಿಜಯಪುರದಲ್ಲಿ 31ನೇ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಮ್ಮೇಳನ: ಸದಸ್ಯತ್ವ ನೋಂದಣಿ



» **ಚಿತ್ರದುರ್ಗ**

ವಿಜಯಪುರ ಜಿಲ್ಲೆಯಲ್ಲಿ 2025ರ ಫೆಬ್ರವರಿ 22 ಮತ್ತು 23ರಂದು ಎರಡು ದಿನಗಳ ಕಾಲ ನಡೆಯುವ 31ನೇ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಮ್ಮೇಳನದ ಅಂಗವಾಗಿ ಸಮ್ಮೇಳನದ ಪ್ರತಿನಿಧಿಗಳು ಗುರುವಾರ ಜಿಲ್ಲಾಸ್ಪತ್ರೆಗೆ ಆಗಮಿಸಿ, ಸಮ್ಮೇಳನದ ಕುರಿತು ಮಾಹಿತಿ ನೀಡಿದರು.ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ವಿಜಯಪುರ ಜಿಲ್ಲಾ ಶಾಖೆಯಿಂದ ಅನುಭಾವ–25 ಶರಣ ನಾಡಲ್ಲೊಂದು ವೈದ್ಯ ಸಂಗಮ ಎಂಬ ಶಿರ್ಷಿಕೆಯಡಿಯಲ್ಲಿ 31ನೇ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಮ್ಮೇಳನವು 2025ರ ಫೆ.22 ಮತ್ತು 23ರಂದು ವಿಜಯಪುರ ನಗರದ ಸ್ಟೇಷನ್ ರೋಡ್‌ನ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಮ್ಮೇಳನ ನಡೆಯಲಿದ್ದು, ಸಮ್ಮೇಳನದ ಪೂರ್ವಭಾವಿಯಾಗಿ ಜಿಲ್ಲೆಯ ಸರ್ಕಾರಿ ವೈದ್ಯಾಧಿಕಾರಿಗಳ ಸದಸ್ಯತ್ವ ನೋಂದಣಿ ಮಾಡಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಆನಂದ ಪ್ರಕಾಶ್ ಸೇರಿದಂತೆ ವೈದ್ಯಾಧಿಕಾರಿಗಳಾದ ಡಾ.ಪ್ರಕಾಶ್, ಡಾ.ದೇವರಾಜ್, ಡಾ.ವಿಜಯ್ ಕುಮಾರ್, ವಿಜಯಪುರದ ಡಾ.ಆಕಿಬ್, ಡಾ.ಸಂಗಮೇಶ್, ಡಾ.ಮಂಜುನಾಥ್ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T